ಸಂಪುಟ : 11 ಸಂಚಿಕೆ: 22 ಪುಟ : 4+2 ಬೆಲೆ: 3.00 ಗುರುವಾರ ಫೆಬ್ರವರಿ 19 2026 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYASAKSHI KANNADA DAILY ಕನ್ನಡ ದಿನಪತ್ರಿಕೆ




Volume : 11 Issue : 22 Pages : 4+2 Price : 3.00 Thursday February 19 2026 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

### ಗ್ಯಾರಂಟಿ ಕಾರ್ಯಾಗಾರ, ಉತ್ಸವ ಕಾರ್ಯಕ್ರಮದಲ್ಲಿ ಸಚಿವ ಎಚ್.ಕೆ. ಪಾಟೀಲ ಅಭಿಪ್ರಾಯ

# ಪಂಚ ಗ್ಯಾರಂಟಿ ಯೋಜನೆಯಿಂದ ಕ್ರಾಂತಿಕಾರಕ ಬದಲಾವಣೆ



ಪಂಚ ಗ್ಯಾರಂಟಿಗಳನ್ನು ಮಾನವ ಹಕ್ಕುಗಳನ್ನಾಗಿಸಲು ಪ್ರಯತ್ನಿಸಲಾಗುತ್ತಿದೆ. ಗದಗ ಜನತೆ ವಿಕೇಂದ್ರೀಕರಣ ವ್ಯವಸ್ಥೆಯಲ್ಲಿ ವಿಶ್ವಾಸ ಇಟ್ಟಿದ್ದು, ಬಡಜನರಿಗೆ ದಕ್ಕಬೇಕಾದ ಎಲ್ಲ ಸವಲತ್ತುಗಳನ್ನು ಒದಗಿಸಲು ನಮ್ಮ ಸರಕಾರ ಪ್ರಾಮಾಣಿಕ ಪ್ರಯತ್ನ ಮಾಡುತ್ತಿದೆ. ಚುನಾವಣಾ ಪೂರ್ವದಲ್ಲಿ ಪಂಚ ಗ್ಯಾರಂಟಿಗಳನ್ನು ಘೋಷಿಸಲಾಗಿತ್ತು. ಆದರೆ ಈ ಮಹತ್ವಾಕಾಂಕ್ಷೆ ಯೋಜನೆಗಳನ್ನು ಅಧಿಕಾರ ವಹಿಸಿದ ಕೆಲ ದಿನಗಳಲ್ಲಿ ಜಾರಿಗೊಳಿಸಿ ಯಶಸ್ವಿಯಾಗಿ ಅನುಷ್ಠಾನಗೊಳಿಸುವ ಮೂಲಕ ಎಲ್ಲ ಟೀಕೆಗಳಿಗೆ ಪ್ರತ್ಯುತ್ತರ ನೀಡಲಾಗಿದೆ.

– ಎಚ್.ಕೆ. ಪಾಟೀಲ.
ಜಿಲ್ಲಾ ಉಸ್ತುವಾರಿ ಸಚಿವರು.



**■ವಿಜಯಸಾಕ್ಷಿ ಸುದ್ದಿ, ಗದಗ**

ಬಡಜನರ ಬದುಕು ಬದಲಾಯಿಸಿದ ಪಂಚ ಗ್ಯಾರಂಟಿ ಯೋಜನೆಗಳ ಮೂಲಕ ರಾಜ್ಯದಲ್ಲಿ ಬಡತನವನ್ನು ಬೇರು ಸಹಿತ ಕಿತ್ತೊಗೆಯುವ ಕ್ರಾಂತಿಕಾರಕ ಕಾರ್ಯವನ್ನು ರಾಜ್ಯ ಸರಕಾರ ಮಾಡಿದೆ ಎಂದು ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರ, ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು ಮತ್ತು ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಎಚ್.ಕೆ. ಪಾಟೀಲ ಅಭಿಪ್ರಾಯಪಟ್ಟರು.

ನಗರದ ಸ್ವಾಮಿ ವಿವೇಕಾನಂದ ಸಭಾಭವನದಲ್ಲಿ ಬುಧವಾರ ಜರುಗಿದ ಗ್ಯಾರಂಟಿ ಕಾರ್ಯಾಗಾರ ಹಾಗೂ ಉತ್ಸವ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ರಾಜ್ಯ ಸರಕಾರದ ಮಹತ್ವಾಕಾಂಕ್ಷಿ ಪಂಚ ಗ್ಯಾರಂಟಿ ಯೋಜನೆ ಜಾರಿಯಿಂದಾಗಿ ಸಮಾಜವನ್ನು ಸುಧಾರಿಸಿ, ಕ್ರಾಂತಿಕಾರಕ ಬದಲಾವಣೆ ತರಲಾಗಿದೆ. ರಾಜ್ಯದ ಪ್ರತಿ ಬಡ ಕುಟುಂಬಕ್ಕೆ 5 ಸಾವಿರ ರೂಪಾಯಿ ಪ್ರತಿ ತಿಂಗಳು ತಲುಪಿಸುವ ಕಾರ್ಯವಾಗುತ್ತಿದೆ. ಜಿಲ್ಲೆಯಲ್ಲಿ 2.28 ಲಕ್ಷ ಕುಟುಂಬಗಳನ್ನು ತಲುಪಿದ್ದೇವೆ. 1 ಕೋಟಿ 10 ಸಾವಿರ ಹಣ ಜನರ ಕೈಮುಟ್ಟಿದೆ ಎಂದರು.

ರಾಜ್ಯ ಗ್ಯಾರಂಟಿ ಯೋಜನೆಗಳ ಪ್ರಾಧಿಕಾರದ ಉಪಾಧ್ಯಕ್ಷ ಎಸ್.ಆರ್. ಪಾಟೀಲ ಮಾತನಾಡಿ, ಗದಗ ಜಿಲ್ಲೆಯ ಇಂದಿನ ಕಾರ್ಯಕ್ರಮ ಅತ್ಯಂತ ಯಶಸ್ವಿಯಾಗಿ ನೆರವೇರಿದೆ. ರಾಜ್ಯದ ಬಡ ಹಾಗೂ ಮಧ್ಯಮ ವರ್ಗದ ಜನರು ಸ್ವಾಭಿಮಾನದ ಜೀವನ ಸಾಗಿಸುವ ಉದ್ದೇಶದೊಂದಿಗೆ ಪಂಚ ಗ್ಯಾರಂಟಿ ಯೋಜನೆ ಜಾರಿಗೊಳಿಸಿ ಅನುಷ್ಠಾನಗೊಳಿಸಲಾಗುತ್ತಿದೆ. ಇಂತಹ ಕಾರ್ಯಕ್ರಮವನ್ನು ಪಂಚಾಯತ ಮಟ್ಟದಲ್ಲಿಯೂ ಆಯೋಜಿಸುವ ಮೂಲಕ ಪಂಚ ಗ್ಯಾರಂಟಿ ಯೋಜನೆ ಬಗ್ಗೆ ಹೆಚ್ಚಿನ ಅರಿವು ಮೂಡಿಸಲು ಮುಂದಾಗಬೇಕು ಎಂದರು.

ರಾಜ್ಯ ಖನಿಜ ಅಭಿವೃದ್ಧಿ ನಿಗಮದ ಅಧ್ಯಕ್ಷ ಜಿ.ಎಸ್. ಪಾಟೀಲ ಮಾತನಾಡಿ, ರಾಜ್ಯ ಸರಕಾರದ ಪಂಚ ಗ್ಯಾರಂಟಿಯನ್ನು ಸಮರ್ಪಕವಾಗಿ ಅನುಷ್ಠಾನಗೊಳಿಸುವುದರ ಮೂಲಕ ರಾಜ್ಯದ ಪ್ರತಿಯೊಂದು ಕುಟುಂಬವನ್ನು ತಲುಪಿರುವುದು ತೃಪ್ತಿಕರವಾಗಿದೆ ಎಂದರು.

ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಎಚ್.ಎಂ. ರೇವಣ್ಣ ಮಾತನಾಡಿ, ಪಂಚ ಗ್ಯಾರಂಟಿ ಯೋಜನೆಗಳ ಜಾರಿಯಿಂದಾಗಿ ಇಂದು ರಾಜ್ಯದಲ್ಲಿ ಸಾಕಷ್ಟು ಬದಲಾವಣೆಗಳು ಕಂಡುಬರುತ್ತಿವೆ. ಪಂಚ ಗ್ಯಾರಂಟಿ ಯೋಜನೆಗಳನ್ನು ಯಶಸ್ವಿಯಾಗಿ ಅನುಷ್ಠಾನಗೊಳಿಸಲಾಗುತ್ತಿದ್ದು, ಈ ಯೋಜನೆಗಳು ಪ್ರತಿಯೊಬ್ಬ ಅರ್ಹರಿಗೆ ತಲುಪಿಸುವ ಕಾರ್ಯವಾಗಬೇಕು ಎಂದರು.

ಕಾರ್ಯಕ್ರಮದ ಸಂಪನ್ಮೂಲ ವ್ಯಕ್ತಿಗಳಾಗಿ ಆಗಮಿಸಿದ್ದ ಮುತ್ತುರಾಜ್ ಮಾತನಾಡಿ, ಸಾಕಷ್ಟು ಟೀಕೆಗಳ ನಡುವೆಯೂ ರಾಜ್ಯ ಸರಕಾರವು ಪಂಚ ಗ್ಯಾರಂಟಿಗಳನ್ನು ಯಶಸ್ವಿಯಾಗಿ ಅನುಷ್ಠಾನಗೊಳಿಸುವ ಮೂಲಕ ಎಲ್ಲ ▶▶4ನೇ ಪುಟಕ್ಕೆ

### ಜಿಲ್ಲಾ ಉದ್ಯೋಗ ಮೇಳದ ಪೂರ್ವಭಾವಿ ಸಭೆಯಲ್ಲಿ ಜಿಲ್ಲಾಧಿಕಾರಿ ಸ್ನೇಹಲ್ ಆರ್

# ಅಧಿಕಾರಿಗಳು ಸಮನ್ವಯದಿಂದ ಕರ್ತವ್ಯ ನಿರ್ವಹಿಸಿ



ಜಿ.ಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭುವನೇಶ ಪಾಟೀಲ ಮಾತನಾಡಿ, ಉದ್ಯೋಗ ಮೇಳದ ಯಶಸ್ವಿ ಆಯೋಜನೆಗೆ ವಿವಿಧ ಸಮಿತಿಗಳನ್ನು ರಚಿಸಲಾಗಿದೆ. ಪ್ರತಿದಿನ ಪ್ರತ್ಯೇಕವಾಗಿ ವಿವಿಧ ಶಿಕ್ಷಣ ಸಂಸ್ಥೆಗಳೊಂದಿಗೆ ಹಾಗೂ ಕೈಗಾರಿಕೋದ್ಯಮಿಗಳೊಂದಿಗೆ ಸಭೆ ಜರುಗಿಸಿ, ಅಗತ್ಯ ಮಾಹಿತಿ ನೀಡಲಾಗುತ್ತಿದೆ ಎಂದು ಹೇಳಿದರು.

**■ವಿಜಯಸಾಕ್ಷಿ ಸುದ್ದಿ, ಧಾರವಾಡ**

ಕರ್ನಾಟಕ ಕೌಶಲ್ಯಾಭಿವೃದ್ಧಿ ನಿಗಮ, ಜಿಲ್ಲಾಡಳಿತ ಮತ್ತು ಜಿಲ್ಲಾ ಪಂಚಾಯಿತಿಗಳ ಸಹಯೋಗದಲ್ಲಿ ಧಾರವಾಡ ಜಿಲ್ಲಾಮಟ್ಟದ ಉದ್ಯೋಗ ಮೇಳವನ್ನು ಆಯೋಜಿಸಲಾಗುತ್ತಿದ್ದು, ಉದ್ಯೋಗ ಆಕಾಂಕ್ಷಿಗಳು ಈ ಅವಕಾಶವನ್ನು ಸದುಪಯೋಗ ಪಡೆದುಕೊಳ್ಳಬೇಕು. ಜಿಲ್ಲಾ ಮಟ್ಟದ ಉದ್ಯೋಗ ಮೇಳದ ಯಶಸ್ವಿಗೆ ಎಲ್ಲ ಇಲಾಖೆ ಅಧಿಕಾರಿಗಳು ಸಮನ್ವಯದಿಂದ ಕರ್ತವ್ಯ ನಿರ್ವಹಿಸಬೇಕೆಂದು ಜಿಲ್ಲಾಧಿಕಾರಿ ಸ್ನೇಹಲ್ ಆರ್ ಹೇಳಿದರು. ಅವರು ಬುಧವಾರ ಸಂಜೆ ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ಜರುಗಿದ ಜಿಲ್ಲಾ ಮಟ್ಟದ ಉದ್ಯೋಗ ಮೇಳ ಆಯೋಜನೆ ಕುರಿತು ವಿವಿಧ ಇಲಾಖೆ ಅಧಿಕಾರಿಗಳೊಂದಿಗೆ ಪೂರ್ವಭಾವಿ ಸಭೆ ಜರುಗಿಸಿ ಮಾತನಾಡಿದರು.

ಧಾರವಾಡ ಜಿಲ್ಲಾ ಉದ್ಯೋಗ ಮೇಳದಲ್ಲಿ ಜಿಲ್ಲೆಯ ಎಲ್ಲ ಪದವಿ, ಐಟಿಐ ಕಾಲೇಜುಗಳ ಪದವೀಧರ ವಿದ್ಯಾರ್ಥಿಗಳು ಪಾಲ್ಗೊಳ್ಳುವಂತೆ ಮಾಹಿತಿ ನೀಡಲು ಇಲಾಖೆಯ ಅಧಿಕಾರಿಗಳಿಗೆ ಸೂಚಿಸಲಾಗಿದೆ. ಅರ್ಹತೆ ಇರುವ ಪ್ರತಿಯೊಬ್ಬ ವ್ಯಕ್ತಿಗೂ ಉದ್ಯೋಗ ದೊರೆಯಬೇಕು. ಉದ್ಯೋಗ ಆಕಾಂಕ್ಷಿಗಳಿಗೆ ಅನುಕೂಲವಾಗಲು ಸರ್ಕಾರದಿಂದಲೇ ಉದ್ಯೋಗ ಮೇಳ ಆಯೋಜಿಸಿ, ಖಾಸಗಿ ಕೈಗಾರಿಕೆಗಳಲ್ಲಿ ಉದ್ಯೋಗ ಕಲ್ಪಿಸಲು ಈ ಉದ್ಯೋಗ ಮೇಳ ಸಂಘಟಿಸಲಾಗುತ್ತಿದೆ ಎಂದು ಹೇಳಿದರು. ಉದ್ಯೋಗ ಮೇಳಕ್ಕೆ ಆಗಮಿಸುವವರಿಗೆ ಕುಡಿಯುವ ನೀರು, ಶೌಚಾಲಯ ಸೇರಿದಂತೆ ಅಗತ್ಯ ಮೂಲಭೂತ ಸೌಕರ್ಯಗಳನ್ನು ಕಲ್ಪಿಸಬೇಕು. ಹೆಚ್ಚಿನ ಸಂಖ್ಯೆಯಲ್ಲಿ ಉದ್ಯೋಗ ಆಕಾಂಕ್ಷಿಗಳು ಉದ್ಯೋಗ ಮೇಳಕ್ಕೆ ನೋಂದಣಿ ಮಾಡಿಕೊಳ್ಳಲು ಪ್ರೋತ್ಸಾಹಿಸಬೇಕು. ಮೇಳಕ್ಕೆ ಆಗಮಿಸುವವರಿಗೆ ಸರಿಯಾದ ಮಾಹಿತಿ ಸಿಗುವಂತೆ ಸಹಾಯ ಕೇಂದ್ರಗಳನ್ನು ನಿರ್ವಹಿಸಬೇಕು ಎಂದು ಹೇಳಿದರು. ವೇದಿಕೆಯಲ್ಲಿ ಜಿ.ಪಂ ಮುಖ್ಯ ಲೆಕ್ಕಾಧಿಕಾರಿ ಲಲಿತಾ ಲಮಾಣಿ, ಮುಖ್ಯ ಯೋಜನಾಧಿಕಾರಿ ದೀಪಕ ಮಡಿವಾಳರ ಇದ್ದರು. ಸಭೆಯಲ್ಲಿ ಉದ್ಯೋಗ ಮೇಳದ ಸಿದ್ಧತೆಗಳ ಕುರಿತು ಜಿ.ಪಂ ಉಪ ಕಾರ್ಯದರ್ಶಿ ಮಲ್ಲಿಕಾರ್ಜುನ ತೊದಲಬಾಗಿ ಮಾತನಾಡಿದರು. ಜಿ.ಪಂ ಯೋಜನಾ ನಿರ್ದೇಶಕ ಬಿ.ಎಸ್. ರಾಠೋಡ ಸ್ವಾಗತಿಸಿದರು. ಜಿಲ್ಲಾ ಯೋಜನಾ ವ್ಯವಸ್ಥಾಪಕ ವಿನೋದ ಕಂಠಿ ನಿರ್ವಹಿಸಿದರು. ವಿನೋದ ಗಾಮನಗಟ್ಟಿ ವಂದಿಸಿದರು. ಸಭೆಯಲ್ಲಿ ಎಲ್ಲ ತಾ.ಪಂ ಕಾರ್ಯನಿರ್ವಾಹಕ ಅಧಿಕಾರಿಗಳು, ಕೈಗಾರಿಕಾ ಇಲಾಖೆ, ಕಾರ್ಮಿಕ ಇಲಾಖೆ, ಕೌಶಲ್ಯಾಭಿವೃದ್ಧಿ ಇಲಾಖೆ, ಐಟಿಐ, ಇಂಜಿನಿಯರಿಂಗ್ ಕಾಲೇಜುಗಳು, ತಾರಿಹಾಳ ಮತ್ತು ಬೇಲೂರು ಕೈಗಾರಿಕಾ ಪ್ರದೇಶದ ಕೈಗಾರಿಕೋದ್ಯಮಿಗಳ ಸಂಘದ ಪ್ರತಿನಿಧಿಗಳು ಭಾಗವಹಿಸಿದ್ದರು.

## ಗ್ಯಾರಂಟಿ ಸಮಾವೇಶದಲ್ಲಿ ಆಕರ್ಷಿಸಿದ ಮಳಿಗೆಗಳು



**■ವಿಜಯಸಾಕ್ಷಿ ಸುದ್ದಿ, ಗದಗ**

ರಾಜ್ಯ ಸರ್ಕಾರದ ಪಂಚ ಗ್ಯಾರಂಟಿ ಯೋಜನೆಗಳ ಜಿಲ್ಲಾ ಮಟ್ಟದ ಸಮಾವೇಶದಲ್ಲಿ ಪಂಚ ಗ್ಯಾರಂಟಿ ಯೋಜನೆಗಳ ಮಳಿಗೆಗಳೊಂದಿಗೆ ರಾಜ್ಯ ಸರ್ಕಾರ ರೂಪಿಸಿರುವ ಜನಪರ ಕಾರ್ಯಕ್ರಮಗಳ ವಿವಿಧ ಇಲಾಖೆಯ ಮಳಿಗೆಗಳನ್ನು ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರ, ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು ಮತ್ತು ಗದಗ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ ಬುಧವಾರ ನಗರದ ಸ್ವಾಮಿ ವಿವೇಕಾನಂದ ಸಭಾಭವನದಲ್ಲಿ ಉದ್ಘಾಟಿಸಿದರು.

ಈ ಸಂದರ್ಭದಲ್ಲಿ ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಎಚ್.ಎಂ. ರೇವಣ್ಣ, ರಾಜ್ಯ ಗ್ಯಾರಂಟಿ ಯೋಜನೆಗಳ ಪ್ರಾಧಿಕಾರದ ಉಪಾಧ್ಯಕ್ಷ ಎಸ್.ಆರ್. ಪಾಟೀಲ, ಜಿಲ್ಲಾ ಗ್ಯಾರಂಟಿ ಯೋಜನೆಗಳ ಪ್ರಾಧಿಕಾರದ ಅಧ್ಯಕ್ಷ ಬಿ.ಬಿ. ಅಸೂಟಿ, ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಸೇರಿದಂತೆ ಗಣ್ಯರು, ಮುಖಂಡರು, ವಿವಿಧ ಇಲಾಖೆಯ ಅಧಿಕಾರಿಗಳು ಹಾಜರಿದ್ದರು.

### ಹೊಸಹಳ್ಳಿಯ ಸರಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ವಾರ್ಷಿಕೋತ್ಸವ ಸಂಭ್ರಮ

# “ಮಕ್ಕಳ ಭವಿಷ್ಯಕ್ಕೆ ಶಿಕ್ಷಣವೇ ಮೂಲಮಂತ್ರ”

**■ವಿಜಯಸಾಕ್ಷಿ ಸುದ್ದಿ, ಗದಗ**

2024–25ನೇ ಸಾಲಿನ 9ನೇ ತರಗತಿಯಲ್ಲಿ ಅತಿ ಹೆಚ್ಚು ಅಂಕಗಳನ್ನು ಪಡೆದ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ನೀಡಿ ಗೌರವಿಸಲಾಯಿತು.

**ಪ್ರಥಮ – ಶಿವಲೀಲಾ ಬ್ಯಾಹಟ್ಟಿ**
**ದ್ವಿತೀಯ – ಮಹಮ್ಮದ್ ಆರಿಫ್ ನದಾಫ್**
**ತೃತೀಯ – ಸೋಮಪ್ಪ ಗೋಣೆಪ್ಪನವರ**

ತಾಲೂಕಿನ ಹೊಸಹಳ್ಳಿ ಗ್ರಾಮದಲ್ಲಿರುವ ಸರಕಾರಿ ಹಿರಿಯ ಪ್ರಾಥಮಿಕ ಶಾಲೆಯ ವಾರ್ಷಿಕೋತ್ಸವ ಕಾರ್ಯಕ್ರಮ ಜರುಗಿತು.

ಕಾರ್ಯಕ್ರಮದ ಸಾನಿಧ್ಯ ವಹಿಸಿದ್ದ ಅಭಿನವ ಭೂದೀಶ್ವರ ಮಹಾಸ್ವಾಮಿಗಳು ಮಾತನಾಡಿ, “ಮಕ್ಕಳ ಭವಿಷ್ಯಕ್ಕೆ ಶಿಕ್ಷಣವೇ ಮೂಲಮಂತ್ರ” ಎಂದು ತಿಳಿಸಿದರು. ಈ ಶಾಲೆಗೆ 145 ವರ್ಷಗಳ ವೈಭವಶಾಲಿ ಇತಿಹಾಸವಿದ್ದು, ಇಲ್ಲಿಂದ ವಿದ್ಯಾಭ್ಯಾಸ ಮಾಡಿದ ಹಲವರು ಉನ್ನತ ಸ್ಥಾನಮಾನಗಳಲ್ಲಿ ಸೇವೆ ಸಲ್ಲಿಸುತ್ತಿದ್ದಾರೆ. ಮುಂದಿನ ದಿನಗಳಲ್ಲಿ ಶಾಲೆಯ ಶತಮಾನೋತ್ಸವವನ್ನು ಎಲ್ಲರೂ ಒಂದಾಗಿ ಆಚರಿಸೋಣ ಎಂದು ಗ್ರಾಮಸ್ಥರಿಗೆ ಕರೆ ನೀಡಿದರು.

ಕಾರ್ಯಕ್ರಮದ ಮುಖ್ಯ ಅತಿಥಿಯಾಗಿ ಬಾಗಲಕೋಟೆ ಜಿಲ್ಲೆಯ ಶಿರೂರು ಪಟ್ಟಣದ 86 ವರ್ಷದ ಶ್ರೀಮತಿ ಗುರಮ್ಮ ಸಂಕಿನಮಠ ಅವರು ಭಾಗವಹಿಸಿ, ಇಂದಿನ ಕಾಲದಲ್ಲಿ ಮೊಬೈಲ್‌ಗಳ ಬಳಕೆಯನ್ನು ಮಕ್ಕಳಿಗೆ ಒಳ್ಳೆಯ ಉದ್ದೇಶಕ್ಕಾಗಿ ಮಾತ್ರ ಬಳಸಲು ಪ್ರೇರೇಪಿಸಬೇಕು ಎಂದರು. ಹೆಣ್ಣು ಮಕ್ಕಳಿಗೆ ಬಾಲ್ಯ ವಿವಾಹ ಮಾಡದೆ, ಉತ್ತಮ ಶಿಕ್ಷಣ ನೀಡಿ ಬೆಳೆಸಬೇಕು. “ಕಲಿತ ನಾರಿ ಮನೆಗೆ ಉಪಕಾರಿ” ಎಂಬ ಸಂದೇಶ ನೀಡಿದರು.

ಇನ್ನೋರ್ವ ಮುಖ್ಯ ಅತಿಥಿಗಳಾದ ಗದಗ ಗ್ರಾಮೀಣ ವಲಯದ ಕ್ಷೇತ್ರ ಶಿಕ್ಷಣಾಧಿಕಾರಿ ವಿ . ವಿ . ▶▶4ನೇ ಪುಟಕ್ಕೆ



### ಪೇಪರ್‌ಲೆಸ್ ನೋಂದಣಿ ಕುರಿತ ಕಾರ್ಯಾಗಾರದಲ್ಲಿ ಜಿಲ್ಲಾ ನೋಂದಣಾಧಿಕಾರಿ ಶಿವಕುಮಾರ ಅಪರಂಜಿ

# ಕಾಗದ ರಹಿತ ನೋಂದಣಿ ಸುರಕ್ಷಿತ



ಈ ಸಂದರ್ಭದಲ್ಲಿ ಮಾತನಾಡಿದ ದಸ್ತು ಬರಹಗಾರರ ರಾಜ್ಯ ಕಾರ್ಯಕಾರಿ ಸಮಿತಿ ಸದಸ್ಯ ನಜೀರ ಡಂಬಳ, ಪೇಪರ್‌ಲೆಸ್ ವ್ಯವಸ್ಥೆ ಜಾರಿ ಮಾಡುವುದರಿಂದ ಅನಕ್ಷರಸ್ಥರಿಗೆ ಮಾರಕವಾಗಲಿದೆ. ರಾಜ್ಯ ಸಂಘದ ನಿರ್ದೇಶನದಂತೆ ಈ ವ್ಯವಸ್ಥೆಯನ್ನು ಧಿಕ್ಕರಿಸಿ ಸಭೆಯಿಂದ ಹೊರನಡೆಯುತ್ತಿದ್ದೇವೆ. ಒಂದು ಸಾರಿ ಓಟಿಪಿ ತೆಗೆದುಕೊಳ್ಳಲಿಕ್ಕೆ ಹರಸಾಹಸ ಮಾಡಬೇಕಾದ ಸ್ಥಿತಿ ಇರುವಾಗ ಪೇಪರ್‌ಲೆಸ್‌ನಿಂದ 3–4 ಬಾರಿ ಓಟಿಪಿ ತೆಗೆದುಕೊಳ್ಳಲು ಕಷ್ಟಸಾಧ್ಯವಾಗಲಿದೆ. ಈ ವ್ಯವಸ್ಥೆ ಕುರಿತು ನಮ್ಮ ಬೇಡಿಕೆಯನ್ನು ರಾಜ್ಯಮಟ್ಟದ ಅಧಿಕಾರಿಗಳ ಗಮನಕ್ಕೆ ತಂದಿದ್ದು, ಅವರೂ ಸಹಿತ ಸಕಾರಾತ್ಮಕವಾಗಿ ಉತ್ತರಿಸಿದ್ದಾರೆ ಎಂದರು.

**■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ**

ಸರಕಾರದ ನಿರ್ದೇಶನದಂತೆ ಮುಂದಿನ ದಿನಮಾನಗಳಲ್ಲಿ ಕಾಗದ ರಹಿತ ನೋಂದಣಿ ವ್ಯವಸ್ಥೆ ಜಾರಿಯಾಗಲಿದ್ದು, ಇದರ ಕುರಿತು ಜಿಲ್ಲೆಯ ಎಲ್ಲ ತಾಲೂಕಾ ಕೇಂದ್ರಗಳಲ್ಲಿಯೂ ಸಹ ಕಾರ್ಯಾಗಾರಗಳು ಹಂತ ಹಂತವಾಗಿ ನಡೆಯುತ್ತಿವೆ ಎಂದು ಜಿಲ್ಲಾ ನೋಂದಣಾಧಿಕಾರಿ ಶಿವಕುಮಾರ ಅಪರಂಜಿ ತಿಳಿಸಿದರು.

ಬುಧವಾರ ಶಿರಹಟ್ಟಿಯ ತಹಸೀಲ್ದಾರ ಕಚೇರಿಯ ಸಭಾಂಗಣದಲ್ಲಿ ಸರಕಾರದ ನಿರ್ದೇಶನದಂತೆ ಆಯೋಜಿಸಿದ್ದ ಪೇಪರ್‌ಲೆಸ್ ನೋಂದಣಿ ವ್ಯವಸ್ಥೆ ಕುರಿತ ಕಾರ್ಯಾಗಾರದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಪೇಪರ್‌ಲೆಸ್ ವ್ಯವಸ್ಥೆಯಿಂದ ದಸ್ತಾವೇಜಿಗೆ ವಿಶಿಷ್ಟ ಸಂಖ್ಯೆ ಸಿಗಲಿದ್ದು, ದಾಖಲೆ ತಿರುಚಿ ಬೇರೆಯವರಿಗೆ ಮಾರಾಟ ಮಾಡುವದಕ್ಕೆ ಕಡಿವಾಣ, ಭೌತಿಕ ದಾಖಲೆ ಇಲ್ಲದೇ ಇರುವುದರಿಂದ ಕಾಗದ ಸಂಗ್ರಹಿಸುವ ತಂಟೆ ಇಲ್ಲ. ಎಲ್ಲಿ ಬೇಕಾದರೂ ತಮ್ಮ ನೋಂದಣಿಯಾದ ದಾಖಲೆ ಡೌನ್‌ಲೋಡ್ ಮಾಡಿಕೊಳ್ಳಬಹುದು. ಸುರಕ್ಷಿತ ಸಂಗ್ರಹಣೆ ಮತ್ತು ದೀರ್ಘಕಾಲೀನ ದಾಖಲೆಗಳನ್ನು ಸಂರಕ್ಷಿಸಬಹುದಾಗಿದೆ. ಕಾಗದ ರಹಿತ ಮತ್ತು ಪರಿಸರ ಸ್ನೇಹಿ, ದಾಖಲೆಗಳ ಸುಲಭ ಪರಿಶೀಲನೆ ಮತ್ತು ಡಿಜಿಟಲ್ ಆಡಳಿತಕ್ಕೆ ಈ ವ್ಯವಸ್ಥೆ ಸಹಕಾರಿಯಾಗಲಿದೆ ಎಂದರು.

ಪೇಪರ್‌ಲೆಸ್ ನೊಂದಣಿ ವ್ಯವಸ್ಥೆ ಕುರಿತು ನಡೆ–ಯುತ್ತಿದ್ದ ಕಾರ್ಯಾಗಾರವನ್ನು ದಸ್ತು ಬರಹಗಾರರು ಬಹಿಷ್ಕರಿಸಿ ಹೊರನಡೆದ ಘಟನೆ ನಡೆಯಿತು. ಉಪನೋಂದಣಾಧಿಕಾರಿ ಶರಣಪ್ಪ ಪವಾರ, ಜಿಲ್ಲಾ ಐಟಿ ಕನ್ಸಲ್ಟಂಟ್ ಕುನಾಲ್ ಕಾರಭಾರಿ, ಶ್ರೀನಿವಾಸ ಬೆಟಗೇರಿ, ತಾಲೂಕಾ ದಸ್ತು ಬರಹಗಾರರ ಸಂಘದ ಅಧ್ಯಕ್ಷ ಅಶೋಕ ಹುಬ್ಬಳ್ಳಿ, ಶಂಕರ ಕುಸ್ಲಾಪೂರ, ಎಸ್.ವಿ.ದಶಮನಿ, ಮೈನುದ್ದೀನ ಅತ್ತಾರ, ಮಂಜುನಾಥ ಮೆಣಸಿನಕಾಯಿ, ಮಹಾದೇವಪ್ಪ ಹೊಂಬಾಳಿ, ಪದ್ಮಾವತಿ ಹುಬ್ಬಳ್ಳಿ, ಬಾಬಾಜಾನ್ ಕೋಳಿವಾಡ, ಮಹಾಂತೇಶ ದಶಮನಿ, ಪ್ರವೀಣ ಹುಬ್ಬಳ್ಳಿ, ಚನ್ನಪ್ಪ ಕುರಿ, ಉಮೇಶ ಶೇಳಕೆ ಮುಂತಾದವರು ಉಪಸ್ಥಿತರಿದ್ದರು.

## ಕಾಲೇಜು ಸಿಬ್ಬಂದಿಗೆ ಆರೋಗ್ಯ ಉಚಿತ ತಪಾಸಣಾ ಶಿಬಿರ



■ವಿಜಯಸಾಕ್ಷಿ ಸುದ್ದಿ, ಗಂಗಾವತಿ

ನಗರದ ಶ್ರೀ ಕೊಲ್ಲಿ ನಾಗೇಶ್ವರರಾವ್ ಗಂಗಯ್ಯ ಸರಕಾರಿ ಪ್ರಥಮ ದರ್ಜೆ ಕಾಲೇಜಿನ ಸಿಬ್ಬಂದಿಗೆ ಮಂಗಳವಾರ ಆರೋಗ್ಯ ಉಚಿತ ತಪಾಸಣಾ ಶಿಬಿರ ಆಯೋಜಿಸಲಾಗಿತ್ತು.

ಕಾಲೇಜಿನ ಯುವ ರೆಡ್ ಕ್ರಾಸ್ ಘಟಕದ ಆಶ್ರಯ ಹಾಗೂ ಸ್ವಸ್ಥ ಆರೋಗ್ಯ ಸಂಸ್ಥೆಯ ಸಹಯೋಗದಲ್ಲಿ ಶಿಬಿರ ನಡೆಯಿತು. ಶಿಬಿರ ಉದ್ದೇಶಿಸಿ ಯುವ ರೆಡ್ ಕ್ರಾಸ್ ಘಟಕದ ಸಂಚಾಲಕ ಅಕ್ಕಿ ಮಾರುತಿ ಮಾತನಾಡಿ, ಒತ್ತಡದ ಈ ದಿನಮಾನಗಳಲ್ಲಿ ಪ್ರತಿಯೊಬ್ಬರೂ ಆರೋಗ್ಯದ ಕಡೆಗೆ ಗಮನ ಕೊಡಬೇಕು. ಮನುಷ್ಯ ಆರೋಗ್ಯವಾಗಿದ್ದರೆ ಕರ್ತವ್ಯ ನಿರ್ವಹಣೆ ಸುಲಭ. ಆರೋಗ್ಯ ಭಾಗ್ಯಕ್ಕಿಂತ ಬೇರೆ ಭಾಗ್ಯ ಮತ್ತೊಂದಿಲ್ಲ ಎಂದರು.

ಕಾಲೇಜಿನ ಪ್ರಾಚಾರ್ಯ ಡಾ.ಶಿವರಾಜ ಗುರಿಕಾರ ಮಾತನಾಡಿ, ಕಾಲೇಜು ಮನೆಯಂತಿದ್ದರೆ, ಕಾಲೇಜಿನಲ್ಲಿ ಕಾರ್ಯ ನಿರ್ವಹಿಸುವ ಎಲ್ಲರೂ ಮನೆಯ ಸದಸ್ಯರಿದ್ದಂತೆ. ಕಾಯಂ ಉಪನ್ಯಾಸಕರು, ಅತಿಥಿ ಉಪನ್ಯಾಸಕರು ಮತ್ತು ಕಾಲೇಜಿನ ಬೋಧಕೇತರ ಸಿಬ್ಬಂದಿ ಶಿಬಿರದ ಪ್ರಯೋಜನ ಪಡೆದು ಉತ್ತಮ ಆರೋಗ್ಯ ಪಡೆಯುವಂತೆ ಕರೆ ನೀಡಿದರು.


ಈ ಸಂದರ್ಭದಲ್ಲಿ ಕಾಲೇಜಿನ ವಿವಿಧ ವಿಭಾಗಗಳ ಉಪನ್ಯಾಸಕರಾದ ಡಾ.ಕೃಷ್ಣಾಜಿ, ಡಾ.ಇಬ್ರಾಹಿಂ, ಡಾ.ಮುಮ್ತಾಜ್ ಬೇಗಂ, ಡಾ.ಅಣ್ಣೋಜಿ ರೆಡ್ಡಿ, ಡಾ.ಶೋಭಾ, ಡಾ.ಅನಿಲ್ ಎಡ್ವರ್ಡ್, ಮಂಜುನಾಥ ಕೆ.ಎಚ್., ಫಣಿರಾಜ್, ದೊರೆಬಾಬು, ಅಂಜುಮ್, ಕೆ.ರವಿಕುಮಾರ್, ರವಿಕುಮಾರ್. ಎಚ್., ರವಿಕುಮಾರ್. ಕೆ.ಎನ್., ಅನಿಲ್‌ಕುಮಾರ್, ಸಲೀಂ, ಸುಮಲತಾ, ನಯನಾ, ಭೂಮಿಕಾ, ವಿವಿಧ ವಿಭಾಗಗಳ ಅತಿಥಿ ಉಪನ್ಯಾಸಕರು, ಬೋಧಕೇತರ ಸಿಬ್ಬಂದಿ ರಾಘಮ್ಮ, ಶಾಮೀದ್, ಪ್ರತಿಭಾ, ವೀರೇಶ್, ಅಶೋಕ್ ಇತರರು ಇದ್ದರು.

**ಕಲಿಯುಗದ ಕಾಮಧೇನು ಗುರು ರಾಘವೇಂದ್ರ ಸ್ವಾಮಿಗಳ ಪಟ್ಟಾಭಿಷೇಕ ದಿನದ ನಿಮಿತ್ತ ಲೇಖನ**

# ಕಾರುಣ್ಯವಾರಿಧಿ ಶ್ರೀ ರಾಘವೇಂದ್ರ ಸ್ವಾಮಿಗಳು

ವೆಂಕಟನಾಥರು ಒಮ್ಮೆ ಕುಂಭಕೋಣ ಪ್ರವಾಸ ಮಾಡುತ್ತಿದ್ದಾಗ ವೆಂಕಟನಾಥ ಮತ್ತು ಅವರ ಪತ್ನಿ ಸರಸ್ವತಿ ಬಾಯಿಯವರಿಗೆ ಸಮಾರಂಭಕ್ಕೆ ಆಹ್ವಾನಿಸಲಾಯಿತು. ಆದರೆ ವೆಂಕಟನಾಥರಿಗೆ ಸರಿಯಾದ ಗೌರವಾದರಗಳನ್ನು ಮಾಡದೇ ಆ ಸಮಾರಂಭದಲ್ಲಿ ಶ್ರೀಗಂಧವನ್ನು ತೇಯುವ ಕೆಲಸವನ್ನು ವಹಿಸುತ್ತಾರೆ. ಆದರೆ ವೆಂಕಟನಾಥರು ಭಗವಂತನ ಸಂಕಲ್ಪದಿಂದ ಅಗ್ನಿ ಸೂಕ್ತ ಪಠಿಸುತ್ತ ಗಂಧವನ್ನು ತೇಯ್ದರು. ಆ ಗಂಧ ಲೇಪಿಸಿಕೊಂಡ ವಿಪ್ರರಿಗೆಲ್ಲ ಮೈ ಉರಿ ಶುರುವಾಯಿತು. ಅದಕ್ಕೆ ಕಾರಣವನ್ನು ಹುಡುಕಲಾಗಿ ಗಂಧ ತೇಯುವವರು ಮಹಾನ್ ವ್ಯಕ್ತಿಗಳಾಗಿದ್ದು, ಅವರಿಗೆ ಮಂತ್ರ ಸಿದ್ಧಿಯಾಗಿದೆ. ಅವರು ಅಗ್ನಿ ಸೂಕ್ತ ಪಠಿಸಿದ್ದರಿಂದ ಈ ತರಹದ ಉರಿ ಶುರುವಾಗಿದೆ ಎಂದು ತಿಳಿದು ಬಂದಿತು. ಆಗ ಗೃಹಸ್ಥರು ತಮ್ಮಿಂದ ಅಪರಾಧವಾಗಿದ್ದು ಕ್ಷಮಿಸಬೇಕೆಂದು ವೆಂಕಟನಾಥರಲ್ಲಿ ಬೇಡಿಕೊಂಡರು. ವೆಂಕಟನಾಥರು ಸ್ವಲ್ಪವೂ ಬೇಸರ ಮಾಡಿಕೊಳ್ಳದೇ ಪುನಃ ಶ್ರೀ ಹರಿಯನ್ನು ಸ್ಮರಣೆ ಮಾಡುತ್ತಾ ವರುಣ ಸೂಕ್ತ ಪಠಿಸಿದಾಗ ಎಲ್ಲರ ಉರಿ ಶಮನವಾಯಿತು. ಇದು ವೆಂಕಟನಾಥರಲ್ಲಿಯ ಮಂತ್ರ ಸಿದ್ಧಿ ಹಾಗೂ ಸಹಾನುಭೂತಿಗೆ ಒಂದು ನಿದರ್ಶನವಾಗಿದೆ.

ಈ ವೆಂಕಟನಾಥರೇ ಮುಂದೆ ಶ್ರೀ ಸುಧೀಂದ್ರ ತೀರ್ಥ-ರಿಂದ ಸನ್ಯಾಸತ್ವ ಸ್ವೀಕರಿಸಿ ರಾಘವೇಂದ್ರ ಸ್ವಾಮಿಗಳಾದರು. ಶ್ರೀ ಗುರು ರಾಘವೇಂದ್ರ ಸ್ವಾಮಿಗಳ ಪೂರ್ವಾಶ್ರಮದ ಹೆಸರು ವೆಂಕಟನಾಥ. ತಂದೆ ತಿಮ್ಮಣ್ಣ ಭಟ್ಟರು, ತಾಯಿ ಗೋಪಿಕಾಂಬೆ. ತಿಮ್ಮಣ್ಣ ಭಟ್ಟರಿಗೆ ಗುರುರಾಜ, ವೆಂಕಟಾಂಬೆ, ವೆಂಕಟನಾಥ ಎಂಬ ಮಕ್ಕಳು ಜನಿಸಿದರು. ವೆಂಕಟನಾಥರು 1595ರಲ್ಲಿ ಈಗಿನ ತಮಿಳುನಾಡಿನ



ಭುವನಗಿರಿ ಎಂಬಲ್ಲಿ ಹಿಂದೂ ಧರ್ಮದ ಬ್ರಾಹ್ಮಣ ಮಾಧ್ವ ಸಂಪ್ರದಾಯದಲ್ಲಿ ಜನಿಸಿದರು. ಇವರು ಮಧ್ವಾಚಾರ್ಯರ ಅನುಯಾಯಿಗಳಾಗಿ ಮಧ್ವ ಮತದ ದ್ವೈತ ಸಿದ್ಧಾಂತವನ್ನು ಪ್ರತಿಪಾದಿಸಿದರು.

ಶ್ರೀ ಸುಧೀಂದ್ರ ತೀರ್ಥರು ವೇದಾಂತ ಸಾಮ್ರಾಜ್ಯಕ್ಕೆ ತಕ್ಕಂತಹ ಉತ್ತರಾಧಿಕಾರಿಯನ್ನು ಹುಡುಕುತ್ತಿರುವಾಗ, ಅವರ ಕನಸಿನಲ್ಲಿ ಶ್ರೀಮೂಲರಾಮದೇವರೇ ಬಂದು ವೆಂಕಟನಾಥರನ್ನು ಶಿಷ್ಯರಾಗಿ ಸ್ವೀಕರಿಸುವಂತೆ ಸೂಚಿಸಿದರು. ಈ ವಿಷಯವನ್ನು ಶ್ರೀ ಸುಧೀಂದ್ರ ತೀರ್ಥರು ವೆಂಕಟನಾಥರಿಗೆ ತಿಳಿಸಿದಾಗ, ವೆಂಕಟನಾಥರು ನಕಾರಾತ್ಮಕ ಉತ್ತರ ಕೊಟ್ಟರು. ಅದರೆ ವೆಂಕಟನಾಥರಿಗೆ ಸಾಕ್ಷಾತ್ ಸರಸ್ವತೀ ದೇವಿಯೇ ಬಂದು ಸನ್ಯಾಸಾಶ್ರಮವನ್ನು ಸ್ವೀಕರಿಸುವಂತೆ ಆಜ್ಞೆಯಿತ್ತಳು.

ಇದರಿಂದ ಮನಸ್ಸನ್ನು ಬದಲಿಸಿದ ವೆಂಕಟನಾಥರು ಸನ್ಯಾಸಾಶ್ರಮ ಸ್ವೀಕರಿಸಿದರು. ಫಾಲ್ಗುಣ ಶುದ್ಧ ಬಿದಿಗೆಯಂದು ತಂಜಾವೂರಿನಲ್ಲಿ ರಘುನಾಥಭೂಪಾಲನ ಹಾಗೂ ಆಗಿನ ಶ್ರೇಷ್ಠರಾದ ಅನೇಕ ಜನವಿದ್ವಾಂಸರು, ಆಚಾರ್ಯರ ಸಮ್ಮುಖದಲ್ಲಿ ಶ್ರೀ ಸುಧೀಂದ್ರತೀರ್ಥರು ಸಂನ್ಯಾಸಾಶ್ರಮವನ್ನು ನೀಡಿ, ಶ್ರೀ ರಾಘವೇಂದ್ರ ತೀರ್ಥ-ರೆಂಬ ಅದ್ಭುತವಾದ ಹೆಸರಿನಿಂದ ನಾಮಕರಣವನ್ನು ಮಾಡಿ, ಪ್ರಣವ ಮಂತ್ರೋಪದೇಶಪೂರ್ವಕವಾಗಿ ವೇದಾಂತ ಸಾಮ್ರಾಜ್ಯದಲ್ಲಿ ಪಟ್ಟಾಭಿಷೇಕವನ್ನು ನೆರವೇರಿಸಿದರು.

ತಮ್ಮ ಪತಿಯ ಸನ್ಯಾಸಾಶ್ರಮದ ಸುದ್ದಿ ತಿಳಿಯುತ್ತಲೇ ಮನನೊಂದ ಪತ್ನಿ ಸರಸ್ವತಿಬಾಯಿ ಬಾವಿಯಲ್ಲಿ ಬಿದ್ದು ಆತ್ಮಹತ್ಯೆ ಮಾಡಿಕೊಂಡು ಪಿಶಾಚಿ ಜನ್ಮ ತಾಳಿ ಶ್ರೀರಾಘವೇಂದ್ರ ಸ್ವಾಮಿಗಳಿದ್ದಲ್ಲಿಗೆ ಬಂದರು. ಆಕೆಯ ದುರವಸ್ಥೆಯನ್ನು ನೋಡಿ ಶ್ರೀ ರಾಘವೇಂದ್ರತೀರ್ಥರು ಕರುಣೆಯಿಂದ ಆಕೆಯ ಮೇಲೆ ತೀರ್ಥವನ್ನು ಸಂಪ್ರೋಕ್ಷಿಸಿ ಆಕೆಗೆ ಪಿಶಾಚಿ ಜನ್ಮದಿಂದ ಮೋಕ್ಷ ದೊರೆಯುವಂತೆ ಮಾಡಿಕೊಟ್ಟರು.

ಗದಗ ಜಿಲ್ಲೆಯ ಕಿರಟಗೇರಿಯ ದೇಸಾಯಿಯವರ ಮನೆಯಲ್ಲಿ ಪೂಜಾ ಸಮಾರಂಭವಿರುತ್ತದೆ. ರಾಯರು ಅಲ್ಲಿಗೆ ಆಗಮಿಸಿರುತ್ತಾರೆ. ಕಿರಟಗೇರಿ ದೇಸಾಯಿಯವರ ಮಗನು ಅಲ್ಲಿನ ಜನರ ಭೋಜನಕ್ಕಾಗಿ ತಯಾರಿಸಿದ ಮಾವಿನ ಹಣ್ಣಿನ ಶೀಕರಣಿಯ ದೊಡ್ಡ ಕಡಾಯಿಯಲ್ಲಿ ಬಿದ್ದು ಅಕಾಲ ಮೃತ್ಯು ಹೊಂದಿರುತ್ತದೆ. ರಾಘವೇಂದ್ರಸ್ವಾಮಿಗಳು ಆ ಮಗುವನ್ನು ತಮ್ಮ ತಪಃಶಕ್ತಿಯಿಂದ ಬದುಕಿಸುತ್ತಾರೆ. ರಾಘವೇಂದ್ರ ರಾಯರ ಅನುಗ್ರಹದಿಂದ ಬಡಬ್ರಾಹ್ಮಣನಾದ ವೆಂಕಣ್ಣನು ಅಕ್ಷರಜ್ಞಾನ ಹೊಂದಿ ಆದೋನಿಯ ಆಸ್ಥಾನದ ದಿವಾನನಾದನು.

ರಾಯರು ಸಂಚಾರ ಮಾಡುತ್ತಿದ್ದಾಗ ಆದೋನಿಯ ಪ್ರಾಂತ್ಯದ ನವಾಬನಾದ ಸಿದ್ಧಿ ಮಸೂದ್‌ಖಾನ್ ನವಾಬನು ರಾಘವೇಂದ್ರ ಸ್ವಾಮಿಗಳ ಪರೀಕ್ಷೆ ಮಾಡಬೇಕೆಂದೆನಿಸುತ್ತದೆ. ರಾಯರ ದರ್ಶನಕ್ಕಾಗಿ ಫಲವನ್ನು ಸ್ವೀಕಾರ ಮಾಡಬೇಕು ಎಂದು ಹೇಳಿ ತಟ್ಟೆಯಲ್ಲಿ ಮಾಂಸವನ್ನು ತಂದು ಬಟ್ಟೆ ಹೊದಿಸಿ ಈ ಫಲವನ್ನು ಸ್ವೀಕರಿಸಬೇಕು ಎಂದು ನವಾಬನು ಹೇಳಿದರು. ಆಗ ರಾಘವೇಂದ್ರ ಸ್ವಾಮಿಗಳು ಶಂಖೋದಕ ಪ್ರೋಕ್ಷಿಸಿದಾಗ ಆ ಮಾಂಸವು ಫಲ ಪುಷ್ಪಗಳಾದವು. ಇದನ್ನು ನೋಡಿದ ನವಾಬನಿಗೆ ತನ್ನ ತಪ್ಪಿನ ಅರಿವಾಗಿ ಕ್ಷಮೆ ಬೇಡಿದನು. ರಾಯರಿಗೆ ಕಾಣಿಕೆಯಾಗಿ ಕೊಡಲು ಏನನ್ನಾದರೂ ಬೇಡು ಎಂದು ನವಾಬ ತಿಳಿಸಿದರು.

ರಾಯರು ತುಂಗಭದ್ರಾ ನದಿ ತೀರದ ಮಂಚಾಲೆಯ ಕ್ಷೇತ್ರವನ್ನು ಬೇಡಿದರು. ಅದು ಬರಡು ಭೂಮಿಯಾಗಿದ್ದರಿಂದ ಬೇರೆ ಫಲವತ್ತಾದ ಭೂಮಿಯನ್ನು ಬೇಡಲು ನವಾಬನು ಕೇಳಿಕೊಳ್ಳುತ್ತಾನೆ. ಆದರೆ ರಾಯರು ಆ ಮಂಚಾಲೆ ಕ್ಷೇತ್ರವನ್ನೇ ಕೊಡಲು ತಿಳಿಸುತ್ತಾರೆ. ಯಾಕೆಂದರೆ ರಾಯರು ಪ್ರಹ್ಲಾದರಾಯರಾಗಿ ಅವತರಿಸಿದಾಗ ತಪಸ್ಸು ಮಾಡಿದ ಜಾಗ ಅದಾಗಿರುತ್ತದೆ.

1671ರಲ್ಲಿ ಶ್ರಾವಣ ಮಾಸ ಕೃಷ್ಣ ಪಕ್ಷದ ದ್ವಿತೀಯದಂದು ಶ್ರೀ ರಾಘವೇಂದ್ರ ಸ್ವಾಮಿಗಳು ಆಂಧ್ರ ಪ್ರದೇಶದ ತುಂಗಭದ್ರಾ ನದಿ ತಟದಲ್ಲಿರುವ ಮಂತ್ರಾಲಯದಲ್ಲಿ ಸಶರೀರ ವೃಂದಾವನಸ್ಥರಾದರು. ಪ್ರತಿ ವರ್ಷ ಶ್ರಾವಣ ಮಾಸ ಕೃಷ್ಣ ಪಕ್ಷ ಪಾಡ್ಯದಿಂದ ಶ್ರಾವಣ ಮಾಸ ಕೃಷ್ಣ ಪಕ್ಷ ತದಿಗೆಯವರೆಗೆ ಭವ್ಯ ಆರಾಧನೆ ನಡೆಯುತ್ತದೆ. ಇಲ್ಲಿಗೆ ನಿತ್ಯವು ಸಾವಿರಾರು ಭಕ್ತರು ಭೇಟಿ ನೀಡುತ್ತಾರೆ. ರಾಘವೇಂದ್ರ ಸ್ವಾಮಿಗಳು ಮಧ್ವಮತಕ್ಕೆ ನೀಡಿದ ಕೊಡುಗೆ ಅಪಾರವಾಗಿದೆ. ಕರುಣಾಮಯಿಗಳಾದ ರಾಯರ ಸ್ಮರಣೆ ಮಾತ್ರದಿ ಭಕ್ತರುಗಳು ತಮ್ಮ ಕಷ್ಟಗಳನ್ನು ಪರಿಹರಿಸಿಕೊಳ್ಳಬಹುದಾಗಿದೆ. ರಾಯರ ಸ್ಮರಣೆ ಹಾಗೂ ಸೇವೆಯಿಂದ ಪುನೀತರಾಗೋಣ.

**– ಅಂಜನಾ ರಾಘವೇಂದ್ರ ಕುಬೇರ.**
ಗದಗ.

**ಅಕ್ಕಮಹಾದೇವಿ ಯೋಗ ವಿಜ್ಞಾನ ಕೇಂದ್ರದಲ್ಲಿ ಮಹಾಶಿವರಾತ್ರಿ**

# ಶಿವಸಂಕಲ್ಪಗಳ ಸಿದ್ಧಿಗೆ ಮಹಾಶಿವರಾತ್ರಿ ಸಹಕಾರಿ



ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ ಅಕ್ಕಮಹಾದೇವಿ ಯೋಗ ವಿಜ್ಞಾನ ಕೇಂದ್ರ ಉಪಾಧ್ಯಕ್ಷೆ ವಿಜಯಲಕ್ಷ್ಮೀ ಮೇಕಳಿ ಮಾತನಾಡಿ, ಮಹಿಳೆಯರು ಹಬ್ಬಗಳನ್ನು ವೈಜ್ಞಾನಿಕ ಮತ್ತು ವೈಚಾರಿಕವಾಗಿ ಆಚರಿಸಬೇಕು. ಆಚರಣೆಯಲ್ಲಿ ಆಡಂಬರ ಇರಬಾರದು. ಪ್ರತಿದಿನ ಆಹಾರದಲ್ಲಿ ಹಣ್ಣು-ಹಂಪಲ ಸೇವಿಸಬೇಕು, ವಾರಕ್ಕೊಮ್ಮೆಯಾದರೂ ಉಪವಾಸ ಮಾಡಿ ಆರೋಗ್ಯ ಹೆಚ್ಚಿಸಿಕೊಳ್ಳಬೇಕೆಂದು ಸೂಚಿಸಿದರು.

■ವಿಜಯಸಾಕ್ಷಿ ಸುದ್ದಿ, ಗದಗ

ಶಿವ ಎಂದರೆ ನಾವೆಲ್ಲರೂ ಈಶ್ವರ ಎಂದು ಭಾವಿಸುತ್ತೇವೆ. ಆಧ್ಯಾತ್ಮಿಕ ಹಿನ್ನೆಲೆಯಲ್ಲಿ ಶಿವ ಎಂದರೆ ಒಳ್ಳೆಯ, ಮಂಗಳಕರ, ಕಲ್ಯಾಣಕಾರಿ, ಶುಭ ಎಂದು ಅರ್ಥೈಸಬಹುದು. ಹಗಲಿರುಳುಗಳ ಚಕ್ರದಂತೆ ಮಾನವ ಬದುಕಿನಲ್ಲಿ ಸುಖ-ದುಃಖಗಳು ಬರುವುದು ಸಹಜ. ಅವುಗಳಲ್ಲಿ ಸಂಕಷ್ಟ (ದುಃಖ)ಗಳೇ ಹೆಚ್ಚಾಗಿರುವವು. ದುಃಖಗಳ ಪರಿಹಾರಕ್ಕಾಗಿ ನಾವು ಶಿವನನ್ನು ಆರಾಧಿಸುತ್ತೇವೆ. ಕಾರಣ ಶಿವನು ಸರ್ವರ ಸಂಕಷ್ಟಗಳನ್ನು ದೂರ ಮಾಡುವವನೆಂಬ ನಂಬಿಗೆ ನಮ್ಮೆಲ್ಲರದಾಗಿದೆ. ಇದಕ್ಕೆ ಶಿವರಾತ್ರಿ ಆಚರಣೆ ಸಾಕ್ಷಿಯಾಗಿದೆ ಎಂದು ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆಯ ನಿವೃತ್ತ ಉಪನಿರ್ದೇಶಕ ಕೆ.ಎಸ್. ಕಲ್ಲನಗೌಡರ ತಿಳಿಸಿದರು.

ಎಸ್.ವಾಯ್.ಬಿ.ಎಂ.ಎಸ್. ಯೋಗಪಾಠಶಾಲೆಯ ಬಸವ ಯೋಗ ಮಹಾವಿದ್ಯಾಲಯ ಮತ್ತು ಅಕ್ಕಮಹಾದೇವಿ ಯೋಗ ವಿಜ್ಞಾನ ಕೇಂದ್ರ ಗದಗ ಇವರು ಸಿದ್ಧಲಿಂಗ ನಗರದಲ್ಲಿನ ಬಸವ ಯೋಗ ಮಂದಿರದಲ್ಲಿ ನಡೆಸಿದ ಶಿವಸಂಕಲ್ಪ ಮತ್ತು ವಚನ ಧ್ಯಾನೋತ್ಸವ ಕಾರ್ಯಕ್ರಮಕ್ಕೆ ಮುಖ್ಯ ಅತಿಥಿಗಳಾಗಿ ಪಾಲ್ಗೊಂಡು ಮಾತನಾಡಿದರು.

ಪ್ರಮಿಳಾ ವಿ.ಬುಳ್ಳಾ ಮಾತನಾಡಿ, ನಾವೆಲ್ಲರೂ ದೇವರನ್ನು ಕಂಡಿಲ್ಲ. ನಾವು ಸಮಾಜ ಸೇವೆಯಲ್ಲಿ, ದೀನ ದಲಿತರ ಅಭ್ಯುದಯದಲ್ಲಿ, ಪರಿಸರ ಸಂರಕ್ಷಣೆಯಲ್ಲಿ ಹೀಗೆ ಮುಂತಾದ ಸೇವೆಗಳಲ್ಲಿ ದೇವರನ್ನು ಕಾಣಬೇಕು. ಸೇವೆಯಲ್ಲಿ ಸಂತೃಪ್ತಿ ಇದೆ. ಆ ಸಂತೃಪ್ತಿಯೇ ದೇವರು, ಶಿವರಾತ್ರಿಯು ನಮ್ಮಲ್ಲಿ ಸೇವಾಭಾವ ಹೆಚ್ಚಿಸಿಕೊಳ್ಳಲು ದೊರೆತ ಅವಕಾಶವಾಗಿದೆ. ಈ ಅವಕಾಶವನ್ನು ಸದುಪಯೋಗ ಪಡಿಸಿಕೊಳ್ಳಬೇಕೆಂದು ಹೇಳಿದರು.

ವೇದಿಕೆಯಲ್ಲಿ ನಿವೃತ್ತ ಶಿಕ್ಷಕರಾದ ಶರಣಪ್ಪ ಬಳ್ಳಾರಿ, ಸುಮಾ ಬಾರಕೇರ, ಪ್ರಾಚಾರ್ಯ ಕೆ.ಎಸ್. ಪಲ್ಲೇದ ಉಪಸ್ಥಿತರಿದ್ದು ಶಿವರಾತ್ರಿ ಕುರಿತು ಪ್ರಾಸ್ತಾವಿಕವಾಗಿ ಮಾತನಾಡಿದರು. ಸಭಿಕರ ಪರವಾಗಿ ಕರ್ನಾಟಕ ಗ್ರಾಮೀಣ ಬ್ಯಾಂಕ್ ಅಧಿಕಾರಿ ಅಶೋಕ ಬಾರಕೇರ ಮಾತನಾಡಿದರು. ಕಾರ್ಯಕ್ರಮದಲ್ಲಿ ಸುಪ್ರಿಯ ಗಬ್ಬೂರ, ವಿ. ನರಸಮ್ಮ, ವಿಜಯಾ ಚನ್ನಶೆಟ್ಟಿ, ಅರುಣಾ ಇಂಗಳಳ್ಳಿ, ಜಯಶ್ರೀ ಡಾವಣಗೇರಿ, ಸಂಗೀತಾ ನಾಕೋಡ, ಸುಲೋಚನಾ ಐಹೊಳ್ಳಿ, ಶೋಭಾ ಭಾಂಡಗೆ, ಅನ್ನಪೂರ್ಣ ಅಸೂಟಿ, ಮಹಾದೇವಿ ಜರಂತಿಮಠ, ಕಸ್ತೂರಿ ಮರಿಗೌಡರ, ಸುಮಾ ಸುರೇಬಾನ, ಸುಮಾ ಹಿಟಬುತ್ತಿ ಹಾಗೂ ಅಕ್ಕಮಹಾದೇವಿ ಯೋಗ ವಿಜ್ಞಾನ ಕೇಂದ್ರದ ಸದಸ್ಯರು ಪಾಲ್ಗೊಂಡಿದ್ದರು.

ಜಯಶ್ರೀ ವಸ್ತ್ರದ ಇವರು ಸಾಮೂಹಿಕವಾಗಿ ಶಿವ ಪ್ರಾರ್ಥನೆ ಶಿವಭಜನೆ ಮಾಡಿಸಿದರು. ಡಾ. ಎಂ.ವಿ. ಐಹೊಳ್ಳಿ ಗಣ್ಯಮಾನ್ಯರನ್ನು ಪರಿಚಯಿಸಿ ಸ್ವಾಗತ ಕೋರಿದರು. ಸುನಂದಾ ಜ್ಯಾನೋಪಂತರ ವಚನ ಧ್ಯಾನೋತ್ಸವ ಕಾರ್ಯಕ್ರಮ ನಿರೂಪಿಸಿದರು. ಡಾ. ಸಂಜನಾ ಸಜ್ಜನರ ಕಾರ್ಯಕ್ರಮ ನಿರೂಪಿಸಿದರು. ಕವಿತಾ ಬಿ.ಗಾಳಪ್ಪನವರ ವಂದಿಸಿದರು.

## ಈಶ್ವರ ಬಸವಣ್ಣ ದೇವರ 16ನೇ ವರ್ಷದ ಜಾತ್ರೆ ಮಾ. 19ಕ್ಕೆ

■ವಿಜಯಸಾಕ್ಷಿ ಸುದ್ದಿ, ಗದಗ

ತಾಲೂಕಿನ ಕಳಸಾಪುರ ಗ್ರಾಮದಲ್ಲಿ ಶ್ರೀಈಶ್ವರ ಬಸವಣ್ಣ ದೇವರ 16ನೇ ವರ್ಷದ ಜಾತ್ರಾ ಮಹೋತ್ಸವದ ಅಂಗವಾಗಿ ಶಿವಶರಣೆ ಗುಡ್ಡಾಪುರದ ಶ್ರೀದಾನಮ್ಮದೇವಿ ಪುರಾಣ ಪ್ರಾರಂಭೋತ್ಸವ, ಸರ್ವಧರ್ಮ ಸಾಮೂಹಿಕ ವಿವಾಹ, ಮಹಾರಥೋತ್ಸವ, ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಲಿವೆ.

ಮಾರ್ಚ್ 3ರಿಂದ 15ರವರೆಗೆ ಪ್ರತಿದಿನ ಸಂಜೆ 7 ಗಂಟೆಗೆ ಶರಣ ಶ್ರೀ ಶಿವಲಿಂಗಯ್ಯಶಾಸ್ತ್ರಿಗಳು ಹಿರೇಮಠ ಸಿದ್ದಾಪುರ ಅವರಿಂದ ಪುರಾಣಪ್ರವಚನ ಜರುಗಲಿದೆ. ಮಾರ್ಚ್ 15ರಂದು ರವಿವಾರ ಬೆಳಗ್ಗೆ 8.30 ಗಂಟೆಗೆ ಕಳಸಾರೋಹಣ ಜರುಗುವುದು.

ಮಾರ್ಚ್ 16ರಿಂದ 18ರವರೆಗೆ ಪ್ರತಿದಿನ ಸಂಜೆ 7 ಗಂಟೆಗೆ ಧಾರ್ಮಿಕ ಮತ್ತು ಸಾಂಸ್ಕೃತಿಕ ಕಾರ್ಯಕ್ರಮಗಳು, ಮಾರ್ಚ್ 18ರಂದು ಬುಧವಾರ ಸಂಜೆ 4 ಗಂಟೆಗೆ ಕುಂಭಮೇಳ ಜರುಗಲಿದೆ. ಮಾರ್ಚ್ 19ರಂದು ಗುರುವಾರ ಯುಗಾದಿ ಪಾಡ್ಯದ ದಿನದಂದು ಮುಂಜಾನೆ 11.30 ಗಂಟೆಗೆ ಸರ್ವಧರ್ಮ ಸಾಮೂಹಿಕ ವಿವಾಹ ಮಹೋತ್ಸವ, ಸಂಜೆ 5.30 ಗಂಟೆಗೆ ಮಹಾರಥೋತ್ಸವ ಜರುಗಲಿದೆ.

ಮಾರ್ಚ್ 19ರಂದು ರಾತ್ರಿ 10 ಗಂಟೆಗೆ ಶ್ರೀ ವೀರಭದ್ರೇಶ್ವರ ನಾಟ್ಯ ಸಂಘ ಕಳಸಾಪುರ ಇವರಿಂದ 'ರೈತನ ತಾಕತ್ತು ಸರ್ಕಾರಕ್ಕೇನು ಗೊತ್ತು' ಎಂಬ ನಾಟಕ ಪ್ರದರ್ಶನಗೊಳ್ಳಲಿದೆ. ಮಾರ್ಚ್ 20ರಂದು ಸಂಜೆ 5.30 ಗಂಟೆಗೆ ಲಘು ರಥೋತ್ಸವ, ರಾತ್ರಿ 9.30 ಗಂಟೆಗೆ ರಸಮಂಜರಿ ಕಾರ್ಯಕ್ರಮ ಜರುಗಲಿದೆ ಎಂದು ಸಂಘಟಕರು ತಿಳಿಸಿದ್ದಾರೆ. ಸರ್ವಧರ್ಮ ಸಾಮೂಹಿಕ ವಿವಾಹ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವವರು ಮಾರ್ಚ್ 15ರ ಒಳಗಾಗಿ ಹೆಸರನ್ನು ನೋಂದಾಯಿಸಬೇಕು. ಹೆಚ್ಚಿನ ಮಾಹಿತಿಗಾಗಿ ಮೊ-8550895448, 9739233949, 9902598388, 8722701169 ಅವರನ್ನು ಸಂಪರ್ಕಿಸಬಹುದಾಗಿದೆ.

## ಇಂದು ಮದ್ಯ ಮಾರಾಟ, ಸಾಗಾಟ ನಿಷೇಧ

■ವಿಜಯಸಾಕ್ಷಿ ಸುದ್ದಿ, ಗದಗ

ದಿ. 19.02.2026 ರಂದು ಗದಗ-ಬೆಟಗೇರಿ ಅವಳಿ ನಗರದಲ್ಲಿ ಜರುಗಲಿರುವ ಸಂತ ಸೇವಾಲಾಲ್ ಜಯಂತಿ ಹಾಗೂ ಶಿವಾಜಿ ಜಯಂತಿ ಮೆರವಣಿಗೆ ಮತ್ತು ಕಾರ್ಯಕ್ರಮಗಳ ಸಂದರ್ಭದಲ್ಲಿನ ಶಾಂತಿ ಮತ್ತು ಸುವ್ಯವಸ್ಥೆ ಕಾಪಾಡುವ ಹಿತದೃಷ್ಟಿಯಿಂದ ಮದ್ಯ ಮಾರಾಟ ಹಾಗೂ ಸಾಗಾಟ ನಿಷೇಧಿಸಲಾಗಿದೆ.

ಗದಗ ಶಹರ, ಬೆಟಗೇರಿ, ಬೆಟಗೇರಿ ಬಡಾವಣೆ, ಗದಗ ಗ್ರಾಮೀಣ ಹಾಗೂ ಮುಳಗುಂದ ಪೊಲೀಸ್ ಠಾಣೆಗಳ ವ್ಯಾಪ್ತಿಯಲ್ಲಿ 19-02-2026 ಬೆಳಿಗ್ಗೆ 6 ಗಂಟೆಯಿಂದ 20-02-2026 ಬೆಳಿಗ್ಗೆ 6 ಗಂಟೆಯವರೆಗೆ ಮದ್ಯ ಮಾರಾಟ ಮತ್ತು ಸಾಗಾಟ ಸಂಪೂರ್ಣ ನಿಷೇಧಿಸಲಾಗಿದೆ.

ಈ ಅವಧಿಯಲ್ಲಿ ಮೇಲ್ಕಾಣಿಸಿದ ವ್ಯಾಪ್ತಿಯಲ್ಲಿರುವ ಎಲ್ಲಾ ಮದ್ಯದ ಅಂಗಡಿಗಳನ್ನು ಮುಚ್ಚಿರಬೇಕೆಂದು ಆದೇಶಿಸಲಾಗಿದೆ. ಪರಿಸ್ಥಿತಿಗೆ ಅನುಗುಣವಾಗಿ ಸಾರ್ವಜನಿಕ ಶಾಂತತೆ ಕಾಪಾಡುವ ದೃಷ್ಟಿಯಿಂದ ವಲಯ ಅಬಕಾರಿ ಇನ್ಸ್‌ಪೆಕ್ಟರ್ ಹಾಗೂ ಅಬಕಾರಿ ಉಪ ಆಯುಕ್ತರು, ಕರ್ನಾಟಕ ಅಬಕಾರಿ ಕಾಯ್ದೆಯ ಅನ್ವಯ ಸೂಕ್ತ ಕ್ರಮ ಕೈಗೊಳ್ಳುವಂತೆ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿಗಳು ಸೂಚಿಸಿದ್ದಾರೆ.

**ಗದಗ ಜಿಲ್ಲಾಡಳಿತದಿಂದ ಛತ್ರಪತಿ ಶಿವಾಜಿ ಮಹಾರಾಜರ ಜಯಂತಿ ಆಚರಣೆ ನಿಮಿತ್ತ ಲೇಖನ**


# ಹಿಂದೂ ಸ್ವರಾಜ್ಯದ ಅಪ್ರತಿಮ ವೀರ

ಭಾರತದ ಇತಿಹಾಸದ ಪುಟಗಳನ್ನು ತಿರುವಿ ಹಾಕಿದರೆ, ಅದರಲ್ಲಿ ಸುವರ್ಣಾಕ್ಷರಗಳಲ್ಲಿ ಬರೆಯಲ್ಪಟ್ಟ ಹೆಸರು 'ಛತ್ರಪತಿ ಶಿವಾಜಿ ಮಹಾರಾಜ'. ಅವರು ಕೇವಲ ಒಬ್ಬ ರಾಜನಾಗಿರಲಿಲ್ಲ, ಬದಲಿಗೆ ಭಾರತೀಯರ ಸ್ವಾಭಿಮಾನದ ಸಂಕೇತವಾಗಿದ್ದರು. ಮೊಘಲರ ಮತ್ತು ಆದಿಲ್ ಶಾಹಿಗಳ ದಬ್ಬಾಳಿಕೆಯಲ್ಲಿ ನಲುಗುತ್ತಿದ್ದ ಜನರಿಗೆ 'ಸ್ವರಾಜ್ಯ'ದ ಕನಸು ತೋರಿಸಿ, ಅದನ್ನು ನನಸು ಮಾಡಿದ ಧೀಮಂತ ನಾಯಕ ಶಿವಾಜಿ.

ಶಿವಾಜಿಯವರ ವ್ಯಕ್ತಿತ್ವ ರೂಪಿತವಾಗಿದ್ದು ಅವರ ಬಾಲ್ಯದಲ್ಲಿಯೇ. ಪುಣೆಯ ಶಿವನೇರಿ ಕೋಟೆಯಲ್ಲಿ 1630ರಲ್ಲಿ ಜನಿಸಿದ ಶಿವಾಜಿಗೆ, ತಾಯಿ ಜೀಜಾಬಾಯಿಯೇ ಮೊದಲ ಗುರು. ರಾಮಾಯಣ, ಮಹಾಭಾರತದ ಕಥೆಗಳನ್ನು ಹೇಳುತ್ತಾ, ಅನ್ಯಾಯದ ವಿರುದ್ಧ ಹೋರಾಡುವ ಕೆಚ್ಚೆದೆಯನ್ನು ತಾಯಿಯೇ ಮಗನ ಮನಸ್ಸಿನಲ್ಲಿ ಬಿತ್ತಿದರು. ತಂದೆ ಶಹಾಜಿರಾಜೆ ಭೋಸ್ಲೆ ದೂರದ ಊರಿನಲ್ಲಿದ್ದರೂ, ತಾಯಿ ಜೀಜಾಬಾಯಿ ಮತ್ತು ಗುರು ದಾದಾಜಿ ಕೊಂಡದೇವ ಅವರ ಮಾರ್ಗದರ್ಶನದಲ್ಲಿ ಶಿವಾಜಿ ಒಬ್ಬ ಅಪ್ರತಿಮ ಯೋಧನಾಗಿ ಬೆಳೆದರು.

ಶಿವಾಜಿ ಮಹಾರಾಜರು ತಮ್ಮ 16ನೇ ವಯಸ್ಸಿನಲ್ಲಿಯೇ ತೆ-ಿರಣ ಕೋಟೆಯನ್ನು ಗೆಲ್ಲುವ ಮೂಲಕ ಸ್ವರಾಜ್ಯ ಸ್ಥಾಪನೆಯ ಮೊದಲ ಹೆಜ್ಜೆ ಇಟ್ಟರು. ಅವರ ಬಳಿ ಬೃಹತ್ ಸೈನ್ಯವಿರಲಿಲ್ಲ. ಆದರೆ ಬುದ್ಧಿವಂತಿಕೆ ಇತ್ತು. ಸಹ್ಯಾದ್ರಿ ಬೆಟ್ಟಗಳ ಭೌಗೋಳಿಕ ರಚನೆಯನ್ನು ತಮ್ಮ ಅನುಕೂಲಕ್ಕೆ ಬಳಸಿಕೊಂಡರು. ಇದನ್ನೇ ಇತಿಹಾಸದಲ್ಲಿ 'ಗನಿಮಿ ಕಾವಾ' ಎಂದು ಕರೆಯಲಾಗುತ್ತದೆ. ಹಠಾತ್ ದಾಳಿ ಮಾಡುವುದು ಮತ್ತು ಶತ್ರುಗಳು ಚೇತರಿಸಿಕೊಳ್ಳುವ ಮುನ್ನವೇ ಮಾಯವಾಗುವುದು ಅವರ ತಂತ್ರವಾಗಿತ್ತು.

ಶಿವಾಜಿಯವರ ಜೀವನದಲ್ಲಿ ಅಫಜಲ್ ಖಾನ್ ನೊಂದಿಗಿನ ಮುಖಾಮುಖಿ ರೋಚಕವಾದದ್ದು. ಬಿಜಾಪುರದ ಬಲಿಷ್ಠ ಸೇನಾಪತಿ ಅಫಜಲ್ ಖಾನ್, ಶಿವಾಜಿಯನ್ನು ಕೊಲ್ಲಲು ಬಂದಾಗ, ಶಿವಾಜಿ ತಮ್ಮ ಬುದ್ಧಿವಂತಿಕೆಯಿಂದ 'ವ್ಯಾಘ್ರ ನಖ' (ಹುಲಿಯ ಉಗುರು) ಬಳಸಿ ಆತನನ್ನು ಸಂಹರಿಸಿದರು. ಇದು ಕೇವಲ ದೈಹಿಕ ಬಲದ ಪ್ರದರ್ಶನವಾಗಿರದೆ, ಸಮಯಪ್ರಜ್ಞೆ ಮತ್ತು ಎಚ್ಚರಿಕೆಯ ಪಾಠವಾಗಿತ್ತು.



ಔರಂಗಜೇಬನು ಒಪ್ಪಂದದ ನೆಪದಲ್ಲಿ ಶಿವಾಜಿಯನ್ನು ಆಗ್ರಾಕ್ಕೆ ಕರೆಸಿ ಬಂಧಿಸಿದನು. ಆದರೆ, ಚಾಣಾಕ್ಷ ಶಿವಾಜಿ ಅನಾರೋಗ್ಯದ ನಾಟಕವಾಡಿ, ಸಿಹಿ ಹಂಚುವ ನೆಪದಲ್ಲಿ ಹಣ್ಣಿನ ಬುಟ್ಟಿಗಳಲ್ಲಿ ಕುಳಿತು ಅಲ್ಲಿಂದ ಪಾರಾದರು. ಈ ಘಟನೆ ಮೊಘಲ್ ಸಾಮ್ರಾಜ್ಯಕ್ಕೆ ದೊಡ್ಡ ಅವಮಾನ ಮತ್ತು ಮರಾಠರಿಗೆ ದೊಡ್ಡ ಗೆಲುವಾಯಿತು.

1674ರಲ್ಲಿ ರಾಯಗಡದಲ್ಲಿ ಶಿವಾಜಿಯವರಿಗೆ ಪಟ್ಟಾಭಿಷೇಕವಾಯಿತು. ಅವರು 'ಛತ್ರಪತಿ' ಎಂದು ಘೋಷಿಸಿಕೊಂಡರು. ಇದು ಕೇವಲ ಒಬ್ಬ ವ್ಯಕ್ತಿಯ ಪಟ್ಟಾಭಿಷೇಕವಾಗಿರಲಿಲ್ಲ, ಶತಮಾನಗಳ ಪರಕೀಯರ ಆಳ್ವಿಕೆಯ ನಂತರ ಹಿಂದೂ ಸಾಮ್ರಾಜ್ಯವೊಂದು ತಲೆ ಎತ್ತಿ ನಿಂತ ಐತಿಹಾಸಿಕ ಕ್ಷಣವಾಗಿತ್ತು.

ಶಿವಾಜಿ ಕೇವಲ ಯುದ್ಧವೀರನಾಗಿರದೆ, ಒಬ್ಬ ದಕ್ಷ ಆಡಳಿತಗಾರನೂ ಆಗಿದ್ದರು. ರಾಜ್ಯಭಾರವನ್ನು ಸುಗಮವಾಗಿ ನಡೆಸಲು ಎಂಟು ಜನ ಮಂತ್ರಿಗಳಿದ್ದ 'ಅಷ್ಟಪ್ರಧಾನ ಮಂಡಲ'ವನ್ನು ರಚಿಸಿದರು. ಸಮುದ್ರದ ಮೇಲಿನ ಹಿಡಿತದ ಮಹತ್ವವನ್ನು ಅರಿತ ಮೊದಲ ಭಾರತೀಯ ರಾಜ ಶಿವಾಜಿ. ಸಿಂಧುದುರ್ಗದಂತಹ ಜಲದುರ್ಗಗಳನ್ನು ಕಟ್ಟಿ, ಬಲಿಷ್ಠ ನೌಕಾಪಡೆಯನ್ನು ಸ್ಥಾಪಿಸಿದ ಅವರನ್ನು 'ಭಾರತೀಯ ನೌಕಾಪಡೆಯ ಪಿತಾಮಹ' ಎಂದು ಕರೆಯಲಾಗುತ್ತದೆ. ಮಧ್ಯವರ್ತಿಗಳ ಹಾವಳಿಯನ್ನು ತಪ್ಪಿಸಿ, ರೈತರಿಂದ ನೇರವಾಗಿ ಕಂದಾಯ ಸಂಗ್ರಹಿಸುವ ಪದ್ಧತಿ ಜಾರಿಗೆ ತಂದರು. ಬರಗಾಲದ ಸಮಯದಲ್ಲಿ ರೈತರಿಗೆ ಧಾನ್ಯ ಮತ್ತು ಸಾಲದ ನೆರವು ನೀಡುತ್ತಿದ್ದರು. ಯುದ್ಧದಲ್ಲಿ ಶತ್ರುಗಳ ಕೋಟೆಯನ್ನು ಗೆದ್ದಾಗ, ಅಲ್ಲಿ ಸಿಗುವ ಮಹಿಳೆಯರನ್ನು ಅತ್ಯಂತ ಗೌರವದಿಂದ, ತಾಯಿಯಂತೆ ಕಂಡು ಅವರನ್ನು ಸುರಕ್ಷಿತವಾಗಿ ಅವರ ಮನೆಗೆ ಕಳುಹಿಸುತ್ತಿದ್ದರು. ಅವರ ಸೈನ್ಯದಲ್ಲಿ ಮಹಿಳೆಯರಿಗೆ ಅಗೌರವ ತೋರುವವರಿಗೆ ಕಠಿಣ ಶಿಕ್ಷೆ ವಿಧಿಸಲಾಗುತ್ತಿತ್ತು. ಮಹಾರಾಜರು ಹಿಂದೂ ಧರ್ಮದ ರಕ್ಷಕರಾಗಿದ್ದರು.

1680ರಲ್ಲಿ ಶಿವಾಜಿ ಮಹಾರಾಜರು ದೈವಾಧೀನರಾದರು. ಆದರೆ ಅವರು ಬೆಳಗಿಸಿದ ಸ್ವರಾಜ್ಯದ ಜ್ಯೋತಿ ನಂದಲಿಲ್ಲ. ಅವರ ಮರಣದ ನಂತರವೂ ಮರಾಠರು ಅದೇ ಸ್ಫೂರ್ತಿಯಿಂದ ಹೋರಾಡಿ ಮೊಘಲ್ ಸಾಮ್ರಾಜ್ಯವನ್ನು ದುರ್ಬಲಗೊಳಿಸಿದರು. ಇಂದಿಗೂ ಛತ್ರಪತಿ ಶಿವಾಜಿ ಮಹಾರಾಜರು ಶಕ್ತಿ, ಯುಕ್ತಿ ಮತ್ತು ದೇಶಭಕ್ತಿಯ ಮೂರ್ತರೂಪವಾಗಿದ್ದಾರೆ. ಕಠಿಣ ಪರಿಸ್ಥಿತಿಗಳಲ್ಲಿಯೂ ಹೇಗೆ ಎದೆಗುಂದದೆ ಹೋರಾಡಬೇಕು ಎಂಬುದಕ್ಕೆ ಶಿವಾಜಿ ಮಹಾರಾಜರ ಜೀವನವೇ ಒಂದು ತೆರೆದ ಪುಸ್ತಕ. ಅವರ ಆದರ್ಶಗಳು ಇಂದಿನ ಯುವಪೀಳಿಗೆಗೆ ದಾರಿದೀಪ.

**– ಹನುಮಂತ ಬೆಂತೂರ.**
ಅಪ್ರೆಂಟಿಸ್, ವಾರ್ತಾ ಮತ್ತು ಸಾ.ಸಂ.ಇಲಾಖೆ-ಗದಗ.

## ಇಂದು ಹಗರಿಬೊಮ್ಮನಹಳ್ಳಿ ಬ್ಲಾಕ್ ಕಾಂಗ್ರೆಸ್ ವತಿಯಿಂದ ಪಾದಯಾತ್ರೆ

■ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ

ಬ್ಲಾಕ್ ಕಾಂಗ್ರೆಸ್ ಸಮಿತಿ ವತಿಯಿಂದ ಫೆಬ್ರವರಿ 19, 2026 ರಂದು ಗುರುವಾರ ಬೆಳಿಗ್ಗೆ 10:00 ಗಂಟೆಗೆ ಪಾದಯಾತ್ರೆ ಹಮ್ಮಿಕೊಳ್ಳಲಾಗಿದೆ.

ಕೆಪಿಸಿಸಿ ಅಧ್ಯಕ್ಷರು ಹಾಗೂ ಉಪ ಮುಖ್ಯಮಂತ್ರಿ ಡಿ.ಕೆ ಶಿವಕುಮಾರ್ ಅವರ ಆದೇಶದಂತೆ ಹಾಗೂ ನಿಕಟ ಪೂರ್ವ ಅಧ್ಯಕ್ಷರು, ಕೆಎಂಎಫ್ ಹಾಗೂ ಮಾಜಿ ಶಾಸಕರಾದ ಬೀಮಾ ನಾಯಕ ಅವರ ನಿರ್ದೇಶನದಂತೆ ಕೇಂದ್ರ ಸರ್ಕಾರ ಜಾರಿಗೆ ತಂದಿರುವ VBGRAMG ಯೋಜನೆಯನ್ನು ರದ್ದುಪಡಿಸಿ, Mahatma Gandhi National Rural Employment Guarantee Act (ಎಂ.ಜಿ.ಎನ್‌ಆರ್‌ಇಜಿಎ) ಉಳಿಸುವಂತೆ ಒತ್ತಾಯಿಸಿ ಈ ಪಾದಯಾತ್ರೆ ಆಯೋಜಿಸಲಾಗಿದೆ.

ಪಾದಯಾತ್ರೆ ಡಾ. ಬಿ.ಆರ್. ಅಂಬೇಡ್ಕರ್ ವೃತ್ತದಿಂದ ಬಸವೇಶ್ವರ ವೃತ್ತದವರೆಗೆ ನಡೆಯಲಿದೆ. ನಂತರ ಹಗರಿಬೊಮ್ಮನಹಳ್ಳಿ ತಹಶೀಲ್ದಾರ್ ಅವರಿಗೆ ಮನವಿ ಪತ್ರ ಸಲ್ಲಿಸಲಾಗುವುದು ಎಂದು ಬ್ಲಾಕ್ ಕಾಂಗ್ರೆಸ್ ಸಮಿತಿ ಅಧ್ಯಕ್ಷರಾದ ಕೋರಿ ಗೋಣಿಬಸಪ್ಪ ತಿಳಿಸಿದ್ದಾರೆ.

ಬ್ಲಾಕ್ ಕಾಂಗ್ರೆಸ್‌ನ ಎಲ್ಲಾ ಪದಾಧಿಕಾರಿಗಳು, ಪುರಸಭೆ ಹಾಗೂ ಪಟ್ಟಣ ಪಂಚಾಯತ್ ಅಧ್ಯಕ್ಷರು, ಉಪಾಧ್ಯಕ್ಷರು, ಸರ್ವ ಸದಸ್ಯರು, ಕೆಪಿಸಿಸಿ ಪದಾಧಿಕಾರಿಗಳು, ಜಿಲ್ಲಾ ಪಂಚಾಯತ್ ಹಾಗೂ ತಾಲೂಕು ಪಂಚಾಯತ್ ಮಾಜಿ ಸದಸ್ಯರು, ಗ್ರಾಮ ಪಂಚಾಯತ್ ಅಧ್ಯಕ್ಷರು, ಉಪಾಧ್ಯಕ್ಷರು, ಸರ್ವ ಸದಸ್ಯರು, ಕಾಂಗ್ರೆಸ್ ಮುಂಚೂಣಿ ಘಟಕಗಳ ಅಧ್ಯಕ್ಷರು, ಗ್ಯಾರಂಟಿ ಪ್ರಾಧಿಕಾರದ ಅಧ್ಯಕ್ಷರು ಮತ್ತು ಪದಾಧಿಕಾರಿಗಳು, ಸರ್ಕಾರದ ನಾಮ ನಿರ್ದೇಶಿತ ಸದಸ್ಯರು ಹಾಗೂ ಹಿರಿಯ ಮುಖಂಡರುಗಳು ತಪ್ಪದೇ ಭಾಗವಹಿಸುವಂತೆ ಬ್ಲಾಕ್ ಕಾಂಗ್ರೆಸ್ ಸಮಿತಿಯ ಅಧ್ಯಕ್ಷರಾದ ಗೋಣಿಬಸಪ್ಪ ಮನವಿ ಮಾಡಿದ್ದಾರೆ.

# ಶ್ರೀ ಮಾರುತೇಶ್ವರ ದೇವರಿಗೆ ಬೆಳ್ಳಿಯ ಕವಚ ಸಮರ್ಪಣೆ



■ವಿಜಯಸಾಕ್ಷಿ ಸುದ್ದಿ, ಗದಗ

ಸಮೀಪದ ತಿಮ್ಮಾಪೂರ ಗ್ರಾಮದ ಆರಾಧ್ಯ ದೈವ ಶ್ರೀ ಮಾರುತೇಶ್ವರ ದೇವರಿಗೆ 9 ಕೆ.ಜಿ ತೂಕದ ಬೆಳ್ಳಿಯ ಕವಚದ ಸಮರ್ಪಣೆ ಹಾಗೂ ಮಾರುತೇಶ್ವರ ದೇವರಿಗೆ ಕಾಂತಿ ಮಾಡಿದ ಪ್ರಯುಕ್ತ ಪುನರ್ ಪ್ರಾಣ ಪ್ರತಿಷ್ಠಾಪನೆ ಕಾರ್ಯಕ್ರಮ ಫೆ.19 ಹಾಗೂ 20ರಂದು ನಡೆಯಲಿದೆ.

ಈ ಕವಚವನ್ನು ದಿವಂಗತ ಶ್ರೀಮತಿ ಲಕ್ಷ್ಮೀಬಾಯಿ ಶಂಕರಗೌಡ ದೇಸಾಯಿ ಇವರ ಸ್ಮರಣಾರ್ಥ ದೇಸಾಯಿ ಕುಟುಂಬದವರು ದೇಣಿಗೆ ನೀಡಿದ್ದಾರೆ. ಫೆ. 19ರಂದು ಶ್ರೀ ಮಾರುತೇಶ್ವರ ದೇವರ ಬೆಳ್ಳಿ ಕವಚದ ಭವ್ಯ ಮೆರವಣಿಗೆ, 251 ಮಹಿಳೆಯರಿಂದ ಕುಂಭಮೇಳ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಗದಗ ಇವರಿಂದ ಪ್ರಾಯೋಜಿತ ಗೊಂಡ ರೋಣ ತಾಲೂಕು ಹೊಸಳ್ಳಿ ಗ್ರಾಮದ ಮಹಿಳಾ ಡೊಳ್ಳಿನ ಮೇಳ ಮತ್ತು ಗ್ರಾಮದ ಶ್ರೀ ಬೀರಲಿಂಗೇಶ್ವರ, ಶ್ರೀ ದುರ್ಗಾದೇವಿ ಡೊಳ್ಳಿನ ಮೇಳ, ಚೌಕಿ ಬಸವೇಶ್ವರ, ಚನ್ನಬಸವೇಶ್ವರ, ಲಕ್ಷ್ಮೀನಾರಾಯಣ ಭಜನಾ ಮೇಳ, ಹರಣಸಿಕಾರಿ ಜಾಂಜ್ ಮೇಳ, ವಿವಿಧ ಸಕಲ ಮಂಗಳ ವಾದ್ಯಗಳೊಂದಿಗೆ ಶ್ರೀ ಚೌಕಿ ಬಸವೇಶ್ವರ ದೇವಸ್ಥಾನದಿಂದ ಪ್ರಾರಂಭವಾಗಿ ಗ್ರಾಮದ ಪ್ರಮುಖ ಬೀದಿಗಳಲ್ಲಿ ಮೆರವಣಿಗೆ ಮೂಲಕ ಮಾರುತೇಶ್ವರ ದೇವಸ್ಥಾನ ತಲುಪುವುದು.

ಫೆ. 20ರಂದು ಶ್ರೀ ಮಾರುತೇಶ್ವರ ಪುನರ್ ಪ್ರಾಣ ಪ್ರತಿಷ್ಠಾಪನೆ ನಡೆಯಲಿದೆ. ಎರಡು ದಿನಗಳ ಕಾಲ ಮಹಾ ಅನ್ನಸಂತರ್ಪಣೆ ನಡೆಯಲಿದೆ.

### ಮಕ್ಕಳ ರಕ್ಷಣಾ ಕಾಯ್ದೆಗಳ ಕುರಿತ ಸಾಮರ್ಥ್ಯಾಭಿವೃದ್ಧಿ ತರಬೇತಿ ಕಾರ್ಯಕ್ರಮ

# ಮಗುವಿನ ರಕ್ಷಣೆ ನಮ್ಮೆಲ್ಲರ ಕರ್ತವ್ಯ

■ವಿಜಯಸಾಕ್ಷಿ ಸುದ್ದಿ, ಗದಗ

ಮಕ್ಕಳ ರಕ್ಷಣಾ ಆಯೋಗವು ಮಕ್ಕಳ ರಕ್ಷಣಾ ನೀತಿ ಕುರಿತು ಗಮನದಲ್ಲಿಟ್ಟುಕೊಂಡು ಮಕ್ಕಳ ರಕ್ಷಣಾ ನೀತಿ ಕುರಿತಂತೆ ತರಬೇತಿ ನೀಡುತ್ತಿದೆ. ಪ್ರತಿಯೊಬ್ಬ ಪ್ರಾಂಶುಪಾಲರು ಪ್ರತಿ ಮಗುವಿಗೆ ರಕ್ಷಣೆ, ಕಾನೂನಿನ ರಕ್ಷಣೆ, ಕುಟುಂಬ ವಾತಾವರಣ ಸಿಗುವಂತೆ ನೋಡಿಕೊಳ್ಳಬೇಕು ಎಂದು ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಸದಸ್ಯ ಶೇಖರಗೌಡ ರಾಮತ್ನಾಳ ತಿಳಿಸಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಮಕ್ಕಳ ರಕ್ಷಣಾ ನಿರ್ದೇಶನಾಲಯ ಬೆಂಗಳೂರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಜಿಲ್ಲಾ ಪೊಲೀಸ್ ಇಲಾಖೆ, ಜಿಲ್ಲಾ ಮಕ್ಕಳ ರಕ್ಷಣಾಘಟಕ, ಗದಗಇವರ ಸಹಯೋಗದಲ್ಲಿ ಮಕ್ಕಳ ರಕ್ಷಣಾ ಕಾಯ್ದೆಗಳ ಕುರಿತು ಐ.ಟಿ.ಐ, ನರ್ಸಿಂಗ್, ಪದವಿ ಪೂರ್ವ ಕಾಲೇಜು ಪ್ರಾಂಶುಪಾಲರುಗಳಿಗೆ ಹಮ್ಮಿಕೊಂಡಿದ್ದ ಸಾಮರ್ಥ್ಯಾಭಿವೃದ್ಧಿ ತರಬೇತಿ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.




ಪತ್ರಿಯೊಂದು ಕಾಲೇಜುಗಳಲ್ಲಿ ಮಕ್ಕಳ ರಕ್ಷಣಾ ನೀತಿ, ಸಲಹಾ ಪೆಟ್ಟಿಗೆ, 1098 ಶಾಶ್ವತ ಗೋಡೆ ಬರಹ ಮೂಲಭೂತ ಸೌಕರ್ಯಗಳ ಕುರಿತು ಗಮನ ಹರಿಸಬೇಕು. ನಿಯಮ ಬದಲಾವಣೆ ಆದಂತೆ ಅದನ್ನು ತಿಳಿದು ಮಗುವಿನ ರಕ್ಷಣೆ ಮಾಡುವುದು ನಮ್ಮೆಲ್ಲರ ಕರ್ತವ್ಯವಾಗಿದೆ. ಬಾಲ್ಯವಿವಾಹ ನಿಷೇಧ ಕಾಯ್ದೆ, ಪೋಕ್ಸೋ, ಬಾಲಕಾರ್ಮಿಕ ನಿಷೇಧ ಕಾಯ್ದೆ ಹಾಗೂ ಮಕ್ಕಳ ಹಕ್ಕುಗಳ ಬಗ್ಗೆ ಹೆಚ್ಚು ಹೆಚ್ಚು ತರಬೇತಿ ಅರಿವು ಕಾರ್ಯಕ್ರಮಗಳು ಆಗಬೇಕು. ಕಾಯ್ದೆಯ ಸರಿಯಾದ ತಿಳುವಳಿಕೆ ಇಲ್ಲದೆ ಇರುವವರು ತರಬೇತಿ ಪಡೆದು ಕಾಯ್ದೆಗಳ ಉಲ್ಲಂಘನೆಯಾಗದಂತೆ ನೋಡಿಕೊಳ್ಳಬೇಕು ಎಂದು ತಿಳಿಸಿದರು. ಪದವಿ ಪೂರ್ವ ಶಿಕ್ಷಣ ಇಲಾಖೆಯ ಪ್ರಭಾರ ಉಪನಿರ್ದೇಶಕ ಜಿ.ಎನ್. ಕುರ್ತಕೋಟಿ ಮಾತನಾಡುತ್ತಾ, ಮಕ್ಕಳ ರಕ್ಷಣಾ ಸಂಬಂಧಿತ ಕಾಯ್ದೆಗಳನ್ನು ಕಾಲೇಜುಗಳಲ್ಲಿ ಕಟ್ಟುನಿಟ್ಟಾಗಿ ಅನುಷ್ಠಾನಗೊಳಿಸಲು ಕ್ರಮವಹಿಸಬೇಕು ಎಂದು ತಿಳಿಸಿದರು.

ಅಪರ ಜಿಲ್ಲಾಧಿಕಾರಿ ಡಾ. ದುರಗೇಶ ಕೆ.ಆರ್ ಮಾತನಾಡಿ, ಪ್ರಾಂಶುಪಾಲರು ತರಬೇತಿಯಲ್ಲಿ ಪಡೆಯುವ ಎಲ್ಲಾ ಅಂಶಗಳನ್ನು ತಮ್ಮ ದಿನನಿತ್ಯದ ಕಾರ್ಯಚಟುವಟಿಕೆಗಳಲ್ಲಿ ಅಳವಡಿಸಿಕೊಂಡು ಮಕ್ಕಳಿಗೆ ಗುಣಮಟ್ಟದ, ಸಂಸ್ಕಾರಭರಿತ, ಮಾನವಿಯ ಮೌಲ್ಯಗಳನ್ನು ಒಳಗೊಂಡ ಶಿಕ್ಷಣವನ್ನು ನೀಡಬೇಕು. ಕಾಲೇಜು ಅವಧಿಯಲ್ಲಿ ಮಕ್ಕಳ ಮೇಲೆ ನಿಗಾವಹಿಸಬೇಕು ಹಾಗೂ ಮಕ್ಕಳು ಮೊಬೈಲ್‌ನ್ನು ಬಳಕೆ ಮಾಡದಂತೆ ನೋಡಿಕೊಳ್ಳಬೇಕು ಎಂದು ಹೇಳಿದರು.

ಹನುಮಂತ ರೆಡ್ಡಿ, ಬಿ.ಆರ್.ಪಿ ಪ್ರೌಢಶಾಲೆ ವಿಭಾಗ, ಬಿ.ಆರ್.ಸಿ, ಮುಂಡರಗಿ ಇವರು ಮಕ್ಕಳ ರಕ್ಷಣಾ ನೀತಿ–2016, ಪೋಕ್ಸೋ–2012ಕಾಯ್ದೆಗಳ ಕುರಿತು ಉಪನ್ಯಾಸ ನೀಡಿದರು.

ಕಾರ್ಯಕ್ರಮದಲ್ಲಿ ಮಹಿಳಾ ಪಿ.ಎಸ್.ಐ ಹೆಚ್.ಡಿ. ಓದುಗೌಡರ, ಮಕ್ಕಳ ಕಲ್ಯಾಣ ಸಮಿತಿಯ ಅಧ್ಯಕ್ಷೆ ಜಯದೇವಿ ಕವಲೂರು, ಪೂರ್ಣಿಮಾ ಹೊಸಮನಿ, ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ರಫೀಕಾ ಹಳ್ಳೂರು ಹಾಗೂ ಸಿಬ್ಬಂದಿ ವರ್ಗದವರು ಹಾಜರಿದ್ದರು. ಮಲ್ಲಪ್ಪ ಹೊಸಳ್ಳಿ ನಿರೂಪಿಸಿದರು.

# ತಂಬ್ರಹಳ್ಳಿ ಭಕ್ತರ ಸಂಭ್ರಮದಲ್ಲಿ ತೋಂಟದಾರ್ಯ ಸ್ವಾಮಿ ಅದ್ದೂರಿ ರಥೋತ್ಸವ!



■ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ

ತಾಲೂಕಿನ ತಂಬ್ರಹಳ್ಳಿ ಗ್ರಾಮದಲ್ಲಿ ಶಿವರಾತ್ರಿ ಅಮಾವಾಸ್ಯೆ ಪ್ರಯುಕ್ತ ಜರುಗಿದ ಶ್ರೀ ಮನ್ನಿರಂಜನ ಜಗದ್ಗುರು ತೆ–ೂಂಟದಾರ್ಯ ಸ್ವಾಮಿಯ ರಥೋತ್ಸವವು ಮಂಗಳವಾರ ಸಂಜೆ ಸಾವಿರಾರು ಭಕ್ತರ ಸಮ್ಮುಖದಲ್ಲಿ ವಿಜೃಂಭಣೆಯಿಂದ ನಡೆಯಿತು.

ರಥೋತ್ಸವದ ನಿಮಿತ್ತ ಬೆಳಿಗ್ಗೆ ಸ್ವಾಮಿಗೆ ಪಂಚಾಮೃತ ಅಭಿಷೇಕ, ಮಹಾರುದ್ರಾಭಿಷೇಕ ಹಾಗೂ ವಿಶೇಷ ಪೂಜಾ ಕಾರ್ಯಕ್ರಮಗಳು ಶ್ರೀ ಕೊಟ್ಟೂರೇಶ್ವರ ದೇವಸ್ಥಾನದಲ್ಲಿ ಜರುಗಿದವು. ಭಕ್ತರು ಹೂ, ಕಾಯಿ, ಹಣ್ಣು ಸಮರ್ಪಿಸಿ ಭಕ್ತಿಭಾವ ಮೆರೆದರು. ಬೆಳಿಗ್ಗೆ ಪೂಜಾ ವಿಧಿವಿಧಾನಗಳೊಂದಿಗೆ ಪ್ರಾರಂಭವಾದ ಉತ್ಸವದಲ್ಲಿ ವಿಶೇಷ ಅಲಂಕಾರ ಮಾಡಲಾದ ತೇರಿಗೆ ಪೂಜೆ ಸಲ್ಲಿಸಲಾಯಿತು.

ಸಂಜೆ ರಥೋತ್ಸವದ ಮುನ್ನ ನಡೆದ ಪಟಾಕ್ಷಿ ಹರಾಜಿನಲ್ಲಿ ಗ್ರಾಮದ ಟಿ.ಎಚ್. ಮಹಾಂತಯ್ಯ ಅವರು –32,101ಕ್ಕೆ ಭಕ್ತಿಪೂರ್ವಕವಾಗಿ ಪಡೆದುಕೊಂಡರು.

ಈ ವೇಳೆ ತೋಂಟದಾರ್ಯ ಸ್ವಾಮಿಯ ಮೂರ್ತಿಯನ್ನು ಪಲ್ಲಕ್ಕಿಯಲ್ಲಿ ಪ್ರತಿಷ್ಠಾಪಿಸಿ ರಥದ ಸುತ್ತ ಐದು ಬಾರಿ ಪ್ರದಕ್ಷಿಣೆ ಹಾಕಿಸಲಾಯಿತು. ಬಳಿಕ ಭಕ್ತರು ತೇರಿನ ಗಾಲಿಗಳಿಗೆ ಈಡುಗಾಯಿ ಒಡೆಯುತ್ತಿದ್ದಂತೆ "ತೋಂಟ–ದಾರ್ಯ ಸ್ವಾಮಿ ಬಹುಪರಾಕ್" ಎಂಬ ಜಯಘೋಷಣೆಗಳ ಮಧ್ಯೆ ಯುವಕರು ಸಡಗರ ಹಾಗೂ ಉತ್ಸಾಹದಿಂದ ತೇರು ಎಳೆದು ಸಂಭ್ರಮಿಸಿದರು.

ಈ ಸಂದರ್ಭದಲ್ಲಿ ಗದ್ದಿಕೆರೆ ಚರಂತೇಶ್ವರ ಸ್ವಾಮೀಜಿ, ಹಗರಿಬೊಮ್ಮನಹಳ್ಳಿ ಹಾಲಸಿದ್ದೇಶ್ವರ ಸ್ವಾಮೀಜಿ, ಬಾಚಿಗೊಂಡನಹಳ್ಳಿ ತೋಂಟದಾರ್ಯ ಶಾಖಾ ಮಠದ ಶಿವಮಹಾಂತ ಸ್ವಾಮೀಜಿ, ಕ್ಷೇತ್ರದ ಶಾಸಕ ಕೆ. ನೇಮಿರಾಜ್ ನಾಯ್ಕ್, ಪುರಸಭೆ ಸದಸ್ಯ ಬಿ.ಡಿ. ಗಂಗಾಧರ, ಐಟಿ. ಕೊಟ್ರೇಶ್ ಸೇರಿದಂತೆ ಗ್ರಾಮದ ಮುಖಂಡರು ಉಪಸ್ಥಿತರಿದ್ದರು.

ತಂಬ್ರಹಳ್ಳಿ ಹಾಗೂ ಸುತ್ತಮುತ್ತಲಿನ ಗ್ರಾಮಗಳ ಗುರುಗಳು, ಮಹಿಳೆಯರು, ಮಕ್ಕಳು ಹಾಗೂ ಯುವಕರು ಭಾಗವಹಿಸಿ ರಥೋತ್ಸವಕ್ಕೆ ವಿಶೇಷ ಕಳೆ ನೀಡಿದರು.

# ಪ್ರತಿಭಾ ಪುರಸ್ಕಾರ ಫೆ. 20ಕ್ಕೆ

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಪಟ್ಟಣದ ಶ್ರೀ ಅನ್ನದಾನ ವಿಜಯ ವಿದ್ಯಾ ಪ್ರಸಾರಕ ಸಮಿತಿಯ ಬಾಲಿಕೆಯರ ಪ್ರೌಢಶಾಲೆಯಲ್ಲಿ 2025–26ನೇ ಸಾಲಿನ ಶ್ರೀ ಮಹಾಸರಸ್ವತಿ ಪೂಜೆ, ಸನ್ಮಾನ ಹಾಗೂ ಪ್ರತಿಭಾ ಪುರಸ್ಕಾರ ಸಮಾರಂಭವು ಫೆ. 20ರ ಮಧ್ಯಾಹ್ನ 1.30ಕ್ಕೆ ಎಸ್.ಎ. ಪದವಿ ಮಹಾವಿದ್ಯಾಲಯದ ಸಭಾಂಗಣದಲ್ಲಿ ಜರುಗಲಿದೆ ಎಂದು ಮುಖ್ಯ ಶಿಕ್ಷಕ ಸಂಗಮೇಶ ಹೂಲಗೇರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಹಾಲಕೆರೆ ಶ್ರೀ ಮಠದ ಶ್ರೀ ಮುಪ್ಪಿನ ಬಸವಲಿಂಗ ಸ್ವಾಮೀಜಿ ದಿವ್ಯ ಸಾನ್ನಿಧ್ಯ ವಹಿಸಲಿದ್ದು, ಶಾಲಾ ಆಡಳಿತ ಮಂಡಳಿ ಚೇರಮನ್ ವೀರಣ್ಣ ಹಳ್ಳಿ ಅಧ್ಯಕ್ಷತೆ ವಹಿಸುವರು. ಸಂಸ್ಥೆಯ ಪ್ರಧಾನ ಕಾರ್ಯದರ್ಶಿ ರವೀಂದ್ರನಾಥ ದೊಡ್ಡಮೇಟಿ ಮುಖ್ಯ ಅತಿಥಿಗಳಾಗಿ ಆಗಮಿಸಲಿದ್ದು, ಧರ್ಮರತ್ನಾಕರ ಪ್ರಶಸ್ತಿ ಪುರಸ್ಕೃತ, ಸಂಸ್ಥೆಯ ಆಡಳಿತಾಧಿಕಾರಿ ಡಾ. ಜಿ.ಕೆ. ಕಾಳೆಯವರಿಗೆ ಗೌರವ ಸನ್ಮಾನ ಜರುಗಲಿದೆ.

ಸಾಹಿತಿ, ನಿವೃತ್ತ ಮುಖ್ಯೋಪಾಧ್ಯಾಯ ಅರುಣ ಬಿ.ಕುಲಕರ್ಣಿ ಸಾಂದರ್ಭಿಕ ನುಡಿಗಳನ್ನು ನುಡಿಯಲಿದ್ದು, ಸದಸ್ಯರಾದ ಎಂ.ಪಿ. ತಳಬಾಳ, ನಿಂಗನಗೌಡ ಲಕ್ಕನಗೌಡ್ರ ಹಾಗೂ ಕೆವಿ ಮತ್ತು ಬಿಎಂ ಉಚಿತ ಪ್ರಸಾದ ನಿಲಯದ ಚೇರಮನ್ ಮಲ್ಲಿಕಾರ್ಜುನಪ್ಪ ಮೆಣಸಗಿಯವರ ಗೌರ ಉಪಸ್ಥಿತಿ ಇರಲಿದೆ ಎಂದು ಪ್ರಕಟಣೆ ತಿಳಿಸಿದೆ.

# ನಾಳೆ ಪೂರ್ವಭಾವಿ ಸಭೆ

■ವಿಜಯಸಾಕ್ಷಿ ಸುದ್ದಿ, ಗದಗ

ಸರ್ಕಾರದ ಆದೇಶದನ್ವಯ ಪ್ರತಿ ವರ್ಷದಂತೆ ಈ ವರ್ಷವೂ ದಿ. 01.03.2026 ರಂದು ನಡೆಯಲಿರುವ ಶ್ರೀ ರೇಣುಕಾಚಾರ್ಯ ಜಯಂತಿ ಯುಗಮಾನೋತ್ಸವ ಕಾರ್ಯಕ್ರಮದ ಅಂಗವಾಗಿ ದಿ. 20.02.2026 ರಂದು ಶುಕ್ರವಾರ ಬೆಳಿಗ್ಗೆ 10.30 ಗಂಟೆಗೆ ಜಿಲ್ಲಾಧಿಕಾರಿಗಳ ಸಭಾಂಗಣದಲ್ಲಿ ಪೂರ್ವಭಾವಿ ಸಭೆ ಆಯೋಜಿಸಲಾಗಿದೆ.

ಸಭೆಯು ಅಪರ ಜಿಲ್ಲಾಧಿಕಾರಿಗಳು, ಗದಗ ಅವರ ಅಧ್ಯಕ್ಷತೆಯಲ್ಲಿ ನಡೆಯಲಿದ್ದು, ಸಂಬಂಧಿತ ಅಧಿಕಾರಿಗಳು ಹಾಗೂ ಸಮುದಾಯದ ಮುಖಂಡರು ಸಭೆಗೆ ಆಗಮಿಸಿ ತಮ್ಮ ಸಲಹೆ ಹಾಗೂ ಅಭಿಪ್ರಾಯಗಳನ್ನು ನೀಡುವಂತೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರಾದ ಬಸವರಾಜ ಬಳ್ಳಾರಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಶ್ರೀ ಬಂಡೇ ರಂಗನಾಥೇಶ್ವರ ಸ್ವಾಮಿ ದೇವಸ್ಥಾನ ರಥೋತ್ಸವಕ್ಕೆ ತೇರಿನ ಗಾಲಿ ಹೊರಹಾಕಿದ ಭಕ್ತರು!



■ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ

ತಾಲೂಕಿನ ತಂಬ್ರಹಳ್ಳಿಯ ಐತಿಹಾಸಿಕ ಶ್ರೀ ಬಂಡೇ ರಂಗನಾಥೇಶ್ವರ ಸ್ವಾಮಿ ರಥೋತ್ಸವದ ಹಿನ್ನಲೆಯಲ್ಲಿ ತೇರಿನ ಗಾಲಿ ಹೊರಹಾಕುವ ಕಾರ್ಯಕ್ಕೆ ಬುಧವಾರ ಬೆಳಿಗ್ಗೆ ಚಾಲನೆ ನೀಡಲಾಯಿತು.

ದೇವಸ್ಥಾನ ಸಮಿತಿಯ ಗೌರವಾಧ್ಯಕ್ಷರಾದ ಸುಕ್ಷೇತ್ರ ನಂದಿಪುರದ ಡಾ. ಮಹೇಶ್ವರ ಸ್ವಾಮಿಗಳ ನೇತೃತ್ವದಲ್ಲಿ ಸಮಿತಿಯ ಪದಾಧಿಕಾರಿಗಳು ಹಾಗೂ ಗ್ರಾಮಸ್ಥರ ಸಮ್ಮುಖದಲ್ಲಿ ಗ್ರಾಮದ ಕೊಟ್ಟೂರೇಶ್ವರ ದೇವಸ್ಥಾನ ಮುಂಭಾಗದಲ್ಲಿ ಸಂಪ್ರದಾಯದಂತೆ ಎತ್ತಿನ ಬಂಡಿಗೆ ಪೂಜೆ ಸಲ್ಲಿಸಲಾಯಿತು. ಬಳಿಕ ಶ್ರೀ ಬಂಡೇ ರಂಗನಾಥೇಶ್ವರ ಸ್ವಾಮಿಯ ತೇರಿನ ಗಾಲಿ ಹೊರಹಾಕುವ ಮೂಲಕ ರಥೋತ್ಸವದ ಪೂರ್ವ ಸಿದ್ಧತಾ ಕಾರ್ಯಕ್ಕೆ ಚಾಲನೆ ನೀಡಲಾಯಿತು.

ಪ್ರತಿ ವರ್ಷ ಹೋಳಿ ಹುಣ್ಣಿಮೆಯಂದು ರಥೋತ್ಸವ ಹಾಗೂ ಜಾತ್ರಾ ಮಹೋತ್ಸವ ಭಕ್ತಿ ಭಾವದಿಂದ ಜರುಗುವುದು ವಿಶೇಷ. ಈ ಹಿನ್ನಲೆಯಲ್ಲಿ ಗ್ರಾಮದಲ್ಲಿ ಹಬ್ಬದ ವಾತಾವರಣ ನಿರ್ಮಾಣವಾಗಿದೆ.

ಈ ಸಂದರ್ಭದಲ್ಲಿ ಗ್ರಾಮದ ಹಿರಿಯರಾದ ಗೌರಜ್ಜನವರ ಬಸವರಾಜಪ್ಪ, ಕಡ್ಡಿ ಚನ್ನಬಸಪ್ಪ, ತಳವಾರ ವೆಂಕೋಬಪ್ಪ, ಎಸ್.ವಿ. ಪಾಟೀಲ್, ಸಮಿತಿಯ ಅಧ್ಯಕ್ಷ ಬಸರಕೋಡು ಲಕ್ಷ್ಮಣ, ಮುಖಂಡರಾದ ಟಿ. ಉದಯ ಭಾಸ್ಕರ್, ಬಣಕಾರ ಕೊಟ್ರೇಶ್, ಬಸವಲಿಂಗನಗೌಡ, ಮಂಜುನಾಥ ಪಾಟೀಲ್, ಸುಣಗಾರ ಪರಶುರಾಮ, ಸೊಬಟಿ ಹರೀಶ್, ಬಾಳೆಕಾಯಿ ವಿರೇಶ್, ಬಂಡಿಕ್ಯಾಂಪ್ ಲಕ್ಷ್ಮಣ, ಬಣಕಾರ ಮಲ್ಲಿಕಾರ್ಜುನ, ಎಂ. ತೋಟಯ್ಯ, ಏಣಿಗಿ ರಾಮಣ್ಣ, ಟಿ. ಪಾಂಡುರಂಗಪ್ಪ, ಮಲ್ಲಿಕಾರ್ಜುನ, ಅರ್ಚಕ ಯಲ್ಲಪ್ಪಗೌಡ್ ಪೂಜಾರ್ ಮಹಾಬಲೇಶ್ವರ ಸ್ವಾಮಿ, ಕರಿಬಸವಯ್ಯ ಸೇರಿದಂತೆ ಅನೇಕ ಭಕ್ತರು ಉಪಸ್ಥಿತರಿದ್ದರು.

### ತೋಂಟದಾರ್ಯ ಕಾಲೇಜ್ ಆಫ್ ಇಂಜಿನಿಯರಿಂಗ್ ಕ್ಯಾಂಪಸ್‌ಲ್ಲಿ ನೂತನ ಕಟ್ಟಡದ ಭೂಮಿಪೂಜೆ

# ಭವಿಷ್ಯದ ತಂತ್ರಜ್ಞಾನಗಳಿಗೆ ಸಜ್ಜಾಗಿ



■ವಿಜಯಸಾಕ್ಷಿ ಸುದ್ದಿ, ಗದಗ

2030ರ ವೇಳೆಗೆ ತಂತ್ರಜ್ಞಾನ ಕ್ಷೇತ್ರದಲ್ಲಿ ಮಹತ್ತರ ಬದಲಾವಣೆಗಳು ಸಂಭವಿಸಲಿದ್ದು, ವಿದ್ಯಾರ್ಥಿಗಳು ಕೃತಕ ಬುದ್ಧಿಮತ್ತೆ (ಂಖ), ಕ್ವಾಂಟಮ್ ಕಂಪ್ಯೂಟಿಂಗ್, ಸೆಮಿಕಂಡಕ್ಟರ್, ಗ್ರೀನ್ ಎನರ್ಜಿ, ಬಯೋಟೆಕ್ನಾಲಜಿ ಸೇರಿದಂತೆ ಭವಿಷ್ಯದ ತಂತ್ರಜ್ಞಾನಗಳಿಗೆ ಸಜ್ಜಾಗಬೇಕು ಎಂದು ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯದ (ವಿಟಿಯು) ಉಪಕುಲಪತಿ ಡಾ. ಎಸ್. ವಿದ್ಯಾಶಂಕರ ಹೇಳಿದರು.

ನಗರದ ಶ್ರೀ ತೋಂಟದ ಸಿದ್ದಲಿಂಗೇಶ್ವರ ಕಲ್ಯಾಣ ಕೇಂದ್ರದ ತೋಂಟದಾರ್ಯ ಕಾಲೇಜ್ ಆಫ್ ಇಂಜಿನಿಯರಿಂಗ್ ಕ್ಯಾಂಪಸ್‌ಲ್ಲಿ ನೂತನ ಕಟ್ಟಡದ ಭೂಮಿಪೂಜೆ ಹಾಗೂ ಅಖಿಲ ಭಾರತೀಯ ತಾಂತ್ರಿಕ ಶಿಕ್ಷಣ ಪರಿಷತ್ (ಂಖಅಖಿಇ) ಸಹಯೋಗದೊಂದಿಗೆ ಐಡಿಯಾ ಪ್ರಯೋಗಾಲಯ ಉದ್ಘಾಟನೆ ಸಮಾರಂಭದಲ್ಲಿ ಅವರು ಮಾತನಾಡಿದರು.

NBA ಮತ್ತು NAAC ನಂತಹ ಮಾನ್ಯತಾ ಸಂಸ್ಥೆಗಳು ಬೋಧನೆ, ಸಂಶೋಧನೆ ಹಾಗೂ ಮೂಲಸೌಕರ್ಯಗಳ ಜೊತೆಗೆ ವಿದ್ಯಾರ್ಥಿಗಳಿಗೆ ದೊರೆಯುವ ಉದ್ಯೋಗಾವಕಾಶಗಳನ್ನು ಮೌಲ್ಯಮಾಪನದ ಪ್ರಮುಖ ಅಂಶವಾಗಿ ಪರಿಗಣಿಸಬೇಕು. 2047ರ ಅಮೃತ ಮಹೋತ್ಸವದ ನಂತರದ ದಶಕ ಭಾರತಕ್ಕೆ ಅತ್ಯಂತ ಮಹತ್ವದ್ದಾಗಿದ್ದು, ಭಾರತವು ವಿಶ್ವ ಆರ್ಥಿಕತೆಯಲ್ಲಿ ಪ್ರಮುಖ ಸ್ಥಾನ ಪಡೆಯುವ ಗುರಿ ಹೊಂದಿದೆ. ಇದಕ್ಕಾಗಿ ಯುವಜನತೆ ಆವಿಷ್ಕಾರ, ಸಂಶೋಧನೆ ಮತ್ತು ಸ್ಟಾರ್ಟ್‌ಅಪ್ ಚಟುವಟಿಕೆಗಳ ಮೂಲಕ ದೇಶದ ಅಭಿವೃದ್ಧಿಗೆ ಕೈಜೋಡಿಸಬೇಕು ಎಂದು ಕರೆ ನೀಡಿದರು.

ವಿದ್ಯಾರ್ಥಿಗಳು ಮೊಬೈಲ್ ಗೀಳಿನಿಂದ ದೂರವಿದ್ದು ಸಮಯದ ಮಹತ್ವ ಅರಿತು, ಏಕಾಗ್ರತೆಯಿಂದ ಅಭ್ಯಾಸ ಮಾಡಬೇಕು. ತಂತ್ರಜ್ಞಾನ ಕ್ಷೇತ್ರದ ಹೊಸ ಅವಕಾಶಗಳನ್ನು ಅರಿತು ಕೌಶಲ್ಯಾಭಿವೃದ್ಧಿಗೆ ಒತ್ತು ನೀಡಬೇಕು. ಅಗತ್ಯ ಸೌಲಭ್ಯಗಳನ್ನು ಒದಗಿಸಲು ವಿಟಿಯು ಸದಾ ಸಿದ್ಧವಾಗಿದೆ ಎಂದು ಭರವಸೆ ನೀಡಿದರು.

ಮಹಾವಿದ್ಯಾಲಯದ ಪ್ರಾಂಶುಪಾಲರಾದ ಡಾ. ಮಹೇಶ ಎಂ.ಅವಟಿ ಮಾತನಾಡಿ, ಸುಮಾರು ರೂ. 60 ಲಕ್ಷ ವೆಚ್ಚದಲ್ಲಿ AICTE ಸಹಯೋಗದೊಂದಿಗೆ ನಿರ್ಮಿಸಲಾದ ಐಡಿಯಾ ಪ್ರಯೋಗಾಲಯ ಹಾಗೂ ನೂತನ ಕಟ್ಟಡದ ವಿವರಗಳನ್ನು ನೀಡಿ, ಹೊಸ ಕಟ್ಟಡದಲ್ಲಿ ಆಧುನಿಕ ಪ್ರಯೋಗಾಲಯಗಳು, ಕಂಪ್ಯೂಟರ್ ಲ್ಯಾಬ್‌ಗಳು, ತರಬೇತಿ ಮತ್ತು ಪ್ಲೇಸ್ಮೆಂಟ್ ಕೇಂದ್ರಗಳು, ಸಭಾಂಗಣಗಳು, ಸ್ಟಾರ್ಟ್‌ಅಪ್ ಸ್ಪೇಸ್ ಮತ್ತು ಅಲ್ಯೂಮ್ನಿ ಗೆಸ್ಟ್‌ಹೌಸ್ ಸೌಲಭ್ಯಗಳನ್ನು ಕಲ್ಪಿಸಲಾಗುತ್ತಿದೆ ಎಂದು ತಿಳಿಸಿದರು.

ಸಂಸ್ಥೆಯ ಕಾರ್ಯದರ್ಶಿ ಪ್ರೊ. ಎಸ್.ಎಸ್. ಪಟ್ಟಣಶೆಟ್ಟರ್ ಪ್ರಾಸ್ತಾವಿಕವಾಗಿ ಮಾತನಾಡಿ, ರಾಜ್ಯದ ಬಡ ವಿದ್ಯಾರ್ಥಿಗಳಿಗೆ ಕಡಿಮೆ ವೆಚ್ಚದಲ್ಲಿ ಗುಣಮಟ್ಟದ ತಾಂತ್ರಿಕ ಶಿಕ್ಷಣ ನೀಡುವುದು ನಮ್ಮ ಧ್ಯೇಯ. ಸಂಸ್ಥಾಪಕರಾದ ಲಿ. ಜಗದ್ಗುರು ಡಾ. ತೋಂಟದ ಸಿದ್ದಲಿಂಗ ಮಹಾಸ್ವಾಮಿಗಳ ಆಶಯದಂತೆ ಬಡ ವಿದ್ಯಾರ್ಥಿಗಳಿಗಾಗಿ ಶೀಘ್ರದಲ್ಲೇ ಉಚಿತ ವಸತಿ ನಿಲಯ ಪ್ರಾರಂಭಿಸಲಾಗುವುದು ಎಂದು ತಿಳಿಸಿದರು.

ಸಮಾರಂಭದ ಸಾನ್ನಿಧ್ಯ ವಹಿಸಿದ್ದ ಶಿರೋಳ ತೋಂಟ–ದಾರ್ಯ ಮಠದ ಪೂಜ್ಯ ಶ್ರೀ ಶಾಂತಲಿಂಗ ಮಹಾಸ್ವಾಮೀಜಿಯವರು ಆಶೀರ್ವಚನ ನೀಡಿ, ಗ್ರಾಮೀಣ ಹಾಗೂ ಬಡ ವರ್ಗದ ವಿದ್ಯಾರ್ಥಿಗಳಿಗೆ ಉನ್ನತ ಶಿಕ್ಷಣದ ಅವಕಾಶಗಳು ಇನ್ನಷ್ಟು ದೊರಕುವಂತಾಗಲಿ ಎಂದು ಹಾರೈಸಿದರು.

ಮಾಜಿ ಸಚಿವರಾದ ಎಸ್. ಎಸ್. ಪಾಟೀಲ, ಸಂಸ್ಥೆಯ ಮಾಜಿ ನಿರ್ದೇಶಕರಾದ ಎಸ್.ಟಿ. ಪಾಟೀಲ, ಆಡಳಿತ ಮಂಡಳಿ ಸದಸ್ಯರಾದ ಡಾ. ರಾಜಶೇಖರ ಪವಾಡಶೆಟ್ಟರ ಸೇರಿದಂತೆ ಹಲವು ಗಣ್ಯರು ವೇದಿಕೆಯ ಮೇಲೆ ಉಪಸ್ಥಿತರಿದ್ದರು. ಉಪ ಪ್ರಾಂಶುಪಾಲರಾದ ಡಾ. ಡಿ.ಬಿ. ರೇವಣಕರ ಸ್ವಾಗತಿಸಿದರು. ಡಾ. ಜಯಶ್ರೀ ರಡ್ಡೇರ್ ಕಾರ್ಯಕ್ರಮ ನಿರೂಪಿಸಿದರು.

# ಜವಳಿ ತಂತ್ರಜ್ಞಾನದ ಕೋರ್ಸ್ ಕುರಿತು ಜಾಥಾ




■ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ಕೈಮಗ್ಗ ತಂತ್ರಜ್ಞಾನ ಸಂಸ್ಥೆ, ನರಸಾಪೂರ, ಗದಗ–ಬೆಟಗೇರಿ ಸಂಸ್ಥೆಯ ವತಿಯಿಂದ 3 ವರ್ಷದ ಕೈಮಗ್ಗ ಮತ್ತು ಜವಳಿ ತಂತ್ರಜ್ಞಾನದ ಕೋರ್ಸ್ ಕುರಿತು ಜಾಥಾ ಕಾರ್ಯಕ್ರಮವನ್ನು ಆಯೋಜಿಸಲಾಗಿತ್ತು.


ಸಂಸ್ಥೆಯಿಂದ ಜಾಥಾವನ್ನು ಪ್ರಾರಂಭಿಸಿ ನರಸಾಪೂರ ನೇಕಾರ ಕಾಲೋನಿ ಜನರಿಗೆ ಕೋರ್ಸ್‌ನ ಕುರಿತು ಮಾಹಿತಿ ನೀಡಿ, ಶ್ರೀ ಜಗದ್ಗುರು ಅನ್ನದಾನೀಶ್ವರ ವಿದ್ಯಾ ಸಮಿತಿ ಪ್ರೌಢಶಾಲೆ, ನರಸಾಪೂರ ಸಂಸ್ಥೆಯ ಎಸ್.ಎಸ್.ಎಲ್.ಸಿ ವಿದ್ಯಾರ್ಥಿಗಳಿಗೆ ಎಸ್.ಎಸ್.ಎಲ್.ಸಿಯಲ್ಲಿ ಉತ್ತೀರ್ಣರಾದವರಿಗೆ ಮೂರು ವರ್ಷದ ಕೈಮಗ್ಗ ಮತ್ತು ಜವಳಿ ತಂತ್ರಜ್ಞಾನದ ಕೋರ್ಸ್ ಮತ್ತು ದ್ವಿತೀಯ ಪಿ.ಯು.ಸಿ ವಿಜ್ಞಾನ ವಿಭಾಗ/ಐಟಿಐ/ಜವಳಿ ವಿಭಾಗದ ವೃತಿಪರ ಕೋರ್ಸ್‌ನಲ್ಲಿ ಉತ್ತೀರ್ಣರಾದವರಿಗೆ ನೇರವಾಗಿ ಲ್ಯಾಟರಲ್ ಎಂಟ್ರಿ ಮುಖಾಂತರ ದ್ವಿತೀಯ ವರ್ಷಕ್ಕೆ ಪ್ರವೇಶ ನೀಡಲಾಗುವುದು.

ಪ್ರವೇಶ ಪಡೆದ ವಿದ್ಯಾರ್ಥಿಗಳಿಗೆ ಮಾಸಿಕ ರೂ.2,500ರಂತೆ ಶಿಷ್ಯವೇತನ ನೀಡಲಾಗುವುದು ಮತ್ತು ಸರ್ಕಾರಿ ಇಲಾಖೆ ಹಾಗೂ ಪ್ರತಿಷ್ಠಿತ ಖಾಸಗಿ ಕೈಗಾರಿಕೆಗಳಲ್ಲಿ ಉದ್ಯೋಗಾವಕಾಶ ಇರುವ ಬಗ್ಗೆ ಎಸ್.ಎಸ್.ಎಲ್.ಸಿ ವಿದ್ಯಾರ್ಥಿಗಳಿಗೆ ಕಾಲೇಜಿನ ಪ್ರಾಂಶುಪಾಲರಾದ ಸುಮಲತಾ ಡಿ ಇವರು ಮಾಹಿತಿ ನೀಡಿದರು.

ಈ ಸಂದರ್ಭದಲ್ಲಿ ಸಂಸ್ಥೆಯ ಬೋಧಕ–ಬೋಧಕೇತರ ಸಿಬ್ಬಂದಿಗಳು ಮತ್ತು ಸಂಸ್ಥೆಯ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ನಿಧನ

## ವಿರುಪಾಕ್ಷಗೌಡ ಪಾಟೀಲ



**ಲಕ್ಕುಂಡಿ:** ಇಲ್ಲಿಯ ಗ್ರಾಮ ದೇವತೆ ದೇವಸ್ಥಾನದ ಹತ್ತಿರದ ನಿವಾಸಿ ವಿರುಪಾಕ್ಷಗೌಡ ಕುಬೇರಗೌಡ ಪಾಟೀಲ(67) ಬುಧವಾರ ನಿಧನರಾದರು. ಮೃತರು ಪತ್ನಿ, ಮೂವರು ಪುತ್ರರು ಸೇರಿದಂತೆ ಅಪಾರ ಬಂಧು ಬಳಗ ಅಗಲಿದ್ದಾರೆ.

# ಇಂದು ದಶರಥ ನಂದನ ಶ್ರೀರಾಮ ನಾಟಕ ಪ್ರದರ್ಶನ



■ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಹಾತಲಗೇರಿ ರಸ್ತೆಯ ಕರಿಯಮ್ಮ ಕಲ್ಲು ಬಡಾವಣೆಯ ಶ್ರೀ ಗುರು ರಾಘವೇಂದ್ರ ಸ್ವಾಮಿಗಳ ಮಠದಲ್ಲಿ ಶ್ರೀ ಗುರು ರಾಘವೇಂದ್ರ ಮಹಾಸ್ವಾಮಿಗಳು ಅವರ ಪಟ್ಟಾಭಿಷೇಕ ಮಹೋತ್ಸವದ ಅಂಗವಾಗಿ ವಿಶೇಷ ಕಾರ್ಯಕ್ರಮ ಆಯೋಜಿಸಲಾಗಿದೆ.

ಶ್ರೀ ಗುರು ರಾಘವೇಂದ್ರ ಸೇವಾ ಸಮಿತಿಯ ಆಶ್ರಯದಲ್ಲಿ ಹಾಗೂ ಶ್ರೀ ಗುರು ರಾಘವೇಂದ್ರ ಕಲಾ ಬಳಗದ ವತಿಯಿಂದ ಫೆಬ್ರವರಿ 19ರಂದು ಗುರುವಾರ ಸಂಜೆ 6.30 ಗಂಟೆಗೆ ಸಾಂಸ್ಕೃತಿಕ ಕಾರ್ಯಕ್ರಮವಾಗಿ ನಾಟಕ ಪ್ರದರ್ಶನ ನಡೆಯಲಿದೆ.

ಫಣೇಂದ್ರಚಾರ್ಯ ದ್ಯಾಮೇನಹಳ್ಳಿ ಅವರು ರಚಿಸಿ ನಿರ್ದೇಶಿಸಿರುವ ದಶರಥ ನಂದನ ಶ್ರೀರಾಮ ಎಂಬ ಭಕ್ತಿಪರ ನಾಟಕವನ್ನು ರಂಗಮಂಚಕ್ಕೆ ತರಲಾಗುತ್ತದೆ.

ಭಕ್ತರು ಹಾಗೂ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ನಾಟಕ ವೀಕ್ಷಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಲು ಸಂಘಟಕರು ಕೋರಿದ್ದಾರೆ.

**ಮೇಲ್ಸೇತುವೆ ಕಾಮಗಾರಿಯನ್ನು ಪರಿಶೀಲಿಸಿದ ಶಾಸಕ ಮಹೇಶ ಟೆಂಗಿನಕಾಯಿ, ಡಿಸಿ ಸ್ನೇಹಲ್ ಆರ್**

# ಮುಂದಿನ 6 ತಿಂಗಳಲ್ಲಿ ಮೇಲ್ಸೇತುವೆ ಕಾಮಗಾರಿ ಪೂರ್ಣ

■ವಿಜಯಸಾಕ್ಷಿ ಸುದ್ದಿ, ಹುಬ್ಬಳ್ಳಿ

ಹೊಸುರು ವೃತ್ತದಲ್ಲಿ 4 ಪಿಲ್ಲರ್‌ಗಳನ್ನು ಅಳವಡಿಸುವ ಕಾಮಗಾರಿ ಮುಕ್ತಾಯದ ಹಂತದಲ್ಲಿದೆ. ಟ್ರಾಫಿಕ್ ಸಮಸ್ಯೆಯಾಗದಂತೆ ಕಾಮಗಾರಿಯನ್ನು ಕೈಗೊಳ್ಳಲಾಗಿದೆ. ಮುಂದಿನ ಒಂದು ವಾರದಲ್ಲಿ ಅಧಿಕಾರಿಗಳ ಜೊತೆಗೆ ಸಭೆ ನಡೆಸಿ ಕಾಮಗಾರಿಯನ್ನು ತ್ವರಿತಗತಿಯಲ್ಲಿ ಪೂರ್ಣಗೊಳಿಸಲು ಕ್ರಮವಹಿಸಲಾಗುವುದು. ಮುಂದಿನ 6 ತಿಂಗಳಲ್ಲಿ ಮೇಲ್ಸೇತುವೆ ಕಾಮಗಾರಿಯನ್ನು ಮುಕ್ತಾಯಗೊಳಿಸಲಾಗುವುದು ಎಂದು ಶಾಸಕ ಮಹೇಶ ಟೆಂಗಿನಕಾಯಿ ಹೇಳಿದರು.

ಬುಧವಾರ ನಗರದಲ್ಲಿ ಮೇಲ್ಸೇತುವೆ ಕಾಮಗಾರಿಯನ್ನು ಪರಿಶೀಲಿಸಿದ ಬಳಿಕ ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ಈಗಾಗಲೇ 2–3 ತಿಂಗಳಿನಿಂದ ಮೇಲ್ಸೇತುವೆ ಕಾಮಗಾರಿ ವಿಳಂಬದ ಕುರಿತು ಚರ್ಚಿಸಲಾಗಿತ್ತು. ಆದರೆ ಮುಖ್ಯಮಂತ್ರಿಗಳ ಕಾರ್ಯಕ್ರಮಗಳು ಮೇಲಿಂದ ಮೇಲೆ ಜಿಲ್ಲೆಯಲ್ಲಿ ನಡೆದ ಕಾರಣ ಯಾವುದೇ ರೀತಿಯಲ್ಲಿ ಗಮನ ಹರಿಸಲು ಆಗಿರಲಿಲ್ಲ. ನೂತನ ಜಿಲ್ಲಾಧಿಕಾರಿಗಳಾಗಿ ಸ್ನೇಹಲ್ ಆರ್ ಅವರು ಅಧಿಕಾರ ವಹಿಸಿಕೊಂಡ ಬಳಿಕ ಹೊಸುರು ವೃತ್ತದಿಂದ ಚೆನ್ನಮ್ಮ ವೃತ್ತದವರೆಗೆ ಯಾವ ರೀತಿಯಲ್ಲಿ ಮೇಲ್ಸೇತುವೆ ಕಾಮಗಾರಿ ನಡೆದಿದೆ ಎಂಬುದನ್ನು ಪರಿವೀಕ್ಷಣೆ ಮಾಡುವ ಮೂಲಕ ಕಾಮಗಾರಿ ವಿಳಂಬದ ಬಗ್ಗೆ ತಿಳಿದುಕೊಳ್ಳಲಾಗಿದೆ. ಈಗಾಗಲೇ ಸಾರ್ವಜನಿಕರಿಗೆ ತೊಂದರೆಯುಂಟು ಮಾಡುವಂತಹ ಪ್ರದೇಶಗಳಲ್ಲಿ ಕಾಮಗಾರಿಗಳನ್ನು ಸಂಪೂರ್ಣವಾಗಿ ಪೂರ್ಣಗೊಳಿಸಲಾಗಿದೆ ಎಂದರು.

ಗದಗ ರಸ್ತೆಯಲ್ಲಿನ ಕಾಮಗಾರಿ ಈಗಾಗಲೇ ಆರಂಭವಾಗಿದೆ. ಪೊಲೀಸ್ ಸ್ಟೇಶನ್ ಸ್ಥಳಾಂತರಗೊಂಡ ನಂತರ ಕಾಮಗಾರಿಗೆ ವೇಗ ದೊರೆತಿದೆ. ಮುಂದಿನ 15–20 ದಿನಗಳಲ್ಲಿ ಸುಮಾರು 80ಕ್ಕೂ ಅಧಿಕ ಗರ್ಡರ್‌ಗಳನ್ನು ಚೆನ್ನಮ್ಮ ವೃತ್ತದಲ್ಲೇ ಅಳವಡಿಸಲಾಗುತ್ತದೆ. ಕಳೆದ ಎರಡು ವರ್ಷದಿಂದ ಕಾಮಗಾರಿ ಕುರಿತು ಸಾಕಷ್ಟು ಗಮನ ಹರಿಸಲಾಗಿದೆ. ಒಟ್ಟಾರೆಯಾಗಿ ಮೇಲ್ಸೇತುವೆ ಕಾಮಗಾರಿಯನ್ನು ಶೀಘ್ರಗತಿಯಲ್ಲಿ ಪೂರ್ಣಗೊಳಿಸಲು ನಿರ್ಧರಿಸಲಾಗಿದೆ. ಧೂಳು ಮುಕ್ತ ನಗರ ಮಾಡಲು ಮುತುವರ್ಜಿ ವಹಿಸಲಾಗಿದೆ. ಸಿಸಿ ರಸ್ತೆ ನಿರ್ಮಿಸಲು ಕ್ರಮವಹಿಸಲಾಗುವುದು ಎಂದು ತಿಳಿಸಿದರು.



ಇದೇ ಸಂದರ್ಭದಲ್ಲಿ ಶಾಸಕರು ಮತ್ತು ಜಿಲ್ಲಾಧಿಕಾರಿಗಳು ಹೊಸುರ ವೃತ್ತದಿಂದ ಕಿತ್ತೂರು ರಾಣಿ ಚೆನ್ನಮ್ಮ ವೃತ್ತದವರೆಗೆ ಕಾಲ್ನಡಿಗೆ ಮೂಲಕ ಸಂಚರಿಸಿ ಪ್ರಗತಿಯಲ್ಲಿರುವ ಮೇಲ್ಸೇತುವೆ ಕಾಮಗಾರಿಯನ್ನು ವೀಕ್ಷಣೆ ಮಾಡಿದರು.

ಜಿಲ್ಲಾಧಿಕಾರಿ ಸ್ನೇಹಲ್ ಆರ್ ಮಾತನಾಡಿ, ಮೇಲ್ಸೇತುವೆ ಕಾಮಗಾರಿಯನ್ನು ಹೊಸೂರು ವೃತ್ತದಿಂದ ಚೆನ್ನಮ್ಮ ವೃತ್ತದವರೆಗೆ ಕಾಲ್ನಡಿಗೆ ಮೂಲಕ ನಡೆದು ವೀಕ್ಷಣೆ ಮಾಡಲಾಗಿದೆ. ಮೇಲ್ಸೇತುವೆ ಕಾಮಗಾರಿಯಲ್ಲಿ ಪ್ರಗತಿಯಾಗಿದ್ದು, ಮುಂದಿನ 6 ತಿಂಗಳಲ್ಲಿ ಕಾಮಗಾರಿಯನ್ನು ಪೂರ್ಣಗೊಳಿಸಲು ಯೋಜನೆ ಹಾಕಿಕೊಳ್ಳಲಾಗಿದೆ. ಹೊಸೂರು ವೃತ್ತ ಹಾಗೂ ಚೆನ್ನಮ್ಮ ವೃತ್ತದಲ್ಲಿ ಶೀಘ್ರಗತಿಯಲ್ಲಿ ಕಾಮಗಾರಿಯನ್ನು ಕೈಗೊಳ್ಳಲಾಗುವುದು ಎಂದು ಸಂಬಂಧಪಟ್ಟ ಅಧಿಕಾರಿಗಳು ತಿಳಿಸಿದ್ದಾರೆ. ನಗರದಲ್ಲಿ ಕಾಮಗಾರಿಗಳು ನಡೆಯುವಾಗ ಸಾಕಷ್ಟು ಸಮಸ್ಯೆಗಳು ಎದುರಾಗುತ್ತವೆ. ಆ ಎಲ್ಲ ಸಮಸ್ಯೆಗಳನ್ನು ಪರಿಹರಿಸಿಕೊಂಡು ಕಾಮಗಾರಿಯನ್ನು ಕೈಗೊಳ್ಳಬೇಕಾಗುತ್ತದೆ. ಮುಂದಿನ 6 ತಿಂಗಳಲ್ಲಿ ಕಾಮಗಾರಿಯನ್ನು ಪೂರ್ಣಗೊಳಿಸದೇ ಇದ್ದಲ್ಲಿ ಗುತ್ತಿದಾರರನ್ನು ಕಪ್ಪು ಪಟ್ಟಿಗೆ ಸೇರಿಸಲು ಕ್ರಮ ಕೈಗೊಳ್ಳಲಾಗುವುದು ಎಂದರು.

ಅಪರ ಜಿಲ್ಲಾಧಿಕಾರಿ ಗೀತಾ ಸಿ.ಡಿ, ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದ ಇಇ ವಿ.ಎನ್. ಪಾಟೀಲ್, ಎಇಇ ಸತೀಶ ನಾಗನೂರ, ಹುಬ್ಬಳ್ಳಿ ಧಾರವಾಡ ಮಹಾನಗರ ಪಾಲಿಕೆಯ ಸಹಾಯಕ ಆಯುಕ್ತರಾದ ವಿಜಯಕುಮಾರ್, ಹುಬ್ಬಳ್ಳಿ ಶಹರ ತಹಸೀಲ್ದಾರ ಮಹೇಶ ಭಗವಂತ ಗಸ್ತೆ ಸೇರಿದಂತೆ ಅಧಿಕಾರಿಗಳು, ಸಾರ್ವಜನಿಕರು ಉಪಸ್ಥಿತರಿದ್ದರು.

# “ಮಕ್ಕಳ ಭವಿಷ್ಯಕ್ಕೆ ಶಿಕ್ಷಣವೇ ಮೂಲಮಂತ್ರ”

▶▶ ಮೊದಲನೇ ಪುಟದಿಂದ

ನಡುವಿನಮನಿ ಅವರು ಪ್ರತಿಭಾ ಪುರಸ್ಕಾರ ವಿತರಿಸಿ ಮಾತನಾಡಿ, ಶಾಲೆಯ ಉತ್ತಮ ಪರಿಸರ ಹಾಗೂ ಶಿಕ್ಷಕರ ಶ್ರಮ ಶ್ಲಾಘನೀಯವಾಗಿದೆ ಎಂದರು. ಪ್ರತಿ ವರ್ಷ ಸಾಧಕರನ್ನು ಕರೆದು ಗೌರವಿಸುವ ಸಂಪ್ರದಾಯ ಮುಂದುವರಿದಿರುವುದು ಹೆಮ್ಮೆಯ ವಿಷಯವಾಗಿದೆ. 200 ಬಾಲ್ಯ ವಿವಾಹಗಳನ್ನು ತಡೆಗಟ್ಟಿದ ಆಸುಕವಯಿತ್ರಿ ಹಾಗೂ ರಾಷ್ಟ್ರಪತಿ ಪ್ರಶಸ್ತಿ ಪುರಸ್ಕೃತ ಗುರಮ್ಮ ಸಂಕಿನಮಠ ಅವರನ್ನು ಗೌರವಿಸುವುದು ಶಾಲೆಯ ಗೌರವವನ್ನು ಹೆಚ್ಚಿಸಿದೆ ಎಂದರು.

ಇದೇ ಸಂದರ್ಭದಲ್ಲಿ ಸರಕಾರಿ ಶಾಲೆಯ 7ನೇ ತರಗತಿಯಲ್ಲಿ ಓದುತ್ತಿರುವ ಕುಮಾರಿ ಕೃಷ್ಣಪ್ರಿಯಾ ಆನಂದ ಬದಿ ಅವರು 300 ವಚನಗಳನ್ನು ನಿರರ್ಗಳವಾಗಿ ಹೇಳುವುದರ ಜೊತೆಗೆ ಶಾಸ್ತ್ರೀಯ ಸಂಗೀತದಲ್ಲಿ ರಾಜ್ಯಮಟ್ಟದ ಪ್ರಶಸ್ತಿ ಪಡೆದಿರುವುದು ಹೆಮ್ಮೆಯ ವಿಷಯವಾಗಿದೆ ಎಂದು ಅಭಿಪ್ರಾಯಪಟ್ಟರು.

ವೇದಿಕೆಯಲ್ಲಿ ಅಕ್ಷರ ದಾಸೋಹ ಅಧಿಕಾರಿ ಶ್ರೀ ಶಂಕರ ಹಡಗಲಿ, ಗ್ರಾಮ ಪಂಚಾಯತ್ ಸದಸ್ಯರಾದ ಚನ್ನಪ್ಪ ಬ್ಯಾಹಟ್ಟಿ, ಬಸವರಾಜ ರೋಣದ, ಬೂದಪ್ಪ ದೊಡಮನಿ, ಸಾಹಿತ್ಯ ಪರಿಷತ್ ಜಿಲ್ಲಾ ಕಾರ್ಯದರ್ಶಿ ಬೂದಪ್ಪ ಅಂಗಡಿ, ನೌಕರರ ಸಂಘದ ಕಾರ್ಯದರ್ಶಿ ಮುತ್ತು ಮಲಕಶೆಟ್ಟಿ ಸೇರಿದಂತೆ ಗಂಗಾಧರ ಬಬ್ಲಿ, ರಮೇಶ ಹೊಂಬಳ, ದೇವರಾಜ ಕಳಕಣ್ಣವರ, ಎಚ್.ಬಿ. ಮೇಟಿ, ಡಿ.ಸಿ. ನದಾಫ್ ಮತ್ತಿತರರು ಉಪಸ್ಥಿತರಿದ್ದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಎಸ್.ಡಿ.ಎಂ.ಸಿ ಅಧ್ಯಕ್ಷರಾದ ಮಂಜುನಾಥ ಬ್ಯಾಹಟ್ಟಿ ವಹಿಸಿದ್ದರು. ಶಾಲಾ ಪ್ರಧಾನಗುರುಮಾತೆ ಎನ್.ಆರ್. ಕಮತ, ಎಸ್.ಎಂ. ಆದಿ, ಕೆ.ವೈ. ಕಣಕಿಕೊಪ್ಪ ಉಪಸ್ಥಿತರಿದ್ದರು. ಕಾರ್ಯಕ್ರಮದಲ್ಲಿ ಭಾಗವಹಿಸಿದ ಗಣ್ಯರನ್ನು ಡಿ.ಎಸ್. ತಳವಾರ ಸ್ವಾಗತಿಸಿದರು. ಶ್ರೀದೇವಿ ಕುರಿ ಕಾರ್ಯಕ್ರಮ ನಿರೂಪಣೆ ಮಾಡಿದರು. ಗೀತಾ ಮೆಣಸಗಿ ವಂದಿಸಿದರು. ನಂತರ ಮಕ್ಕಳ ಸಾಂಸ್ಕೃತಿಕ ಕಾರ್ಯಕ್ರಮಗಳು ನೆರವೇರಿದವು.

# ಆಕ್ಷೇಪಣೆ ಸಲ್ಲಿಕೆಗೆ ಅವಕಾಶ

■ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯ ರೋಣ ಪುರಸಭೆ ಕಾರ್ಯಾಲಯದ ವ್ಯಾಪ್ತಿಯಲ್ಲಿ ಬರುವ ಮಾಲೀಕತ್ವದ ಈ ಕೆಳಕಂಡ ಆಸ್ತಿಗಳನ್ನು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ರೋಣ ಸಿಡಿಪಿಓ ಅವರಿಗೆ ವಿವಿಧ ವಾರ್ಡ್‌ಗಳಲ್ಲಿ ಅಂಗನವಾಡಿ ಕಟ್ಟಡ ನಿರ್ಮಾಣಕ್ಕಾಗಿ ಮಂಜೂರು ಮಾಡಲು ತೀರ್ಮಾನಿಸಲಾಗಿದೆ.

ರಿ.ಸ.ನಂ. 145/1, ಟಿ.ಎಂ.ಸಿ. ನಂ. 2199/2 – ವಾರ್ಡ್ ನಂ. 14, ರಿ.ಸ.ನಂ. 1051/2, ಟಿ.ಎಂ.ಸಿ. ನಂ. 5077/1 – ವಾರ್ಡ್ ನಂ. 11, ರಿ.ಸ.ನಂ. 299/2, ಟಿ.ಎಂ.ಸಿ. ನಂ. 5426/32 ಅ/27 – ವಾರ್ಡ್ ನಂ. 16, ರಿ.ಸ.ನಂ. 144/2 ಬ, ಟಿ.ಎಂ.ಸಿ. ನಂ. 2799/80/27 – ವಾರ್ಡ್ ನಂ. 17, ರಿ.ಸ.ನಂ. 145/ಬ, ಟಿ.ಎಂ.ಸಿ. ನಂ. 2796/227/ಬಿ – ವಾರ್ಡ್ ನಂ. 15 ಹಾಗೂ ರಿ.ಸ.ನಂ. 4/4 ಮತ್ತು 4/5, ಟಿ.ಎಂ.ಸಿ. ನಂ. 5262/38, ಪ್ಲಾಟ್ ನಂ. 37 – ವಾರ್ಡ್ ನಂ. 06

ಈ ಕುರಿತು ಸಾರ್ವಜನಿಕರಿಗೆ ಯಾವುದೇ ತಕರಾರು ಅಥವಾ ಆಕ್ಷೇಪಣೆಗಳಿದ್ದಲ್ಲಿ 15 ದಿನಗಳ ಒಳಗಾಗಿ ಲಿಖಿತವಾಗಿ ರೋಣ ಪುರಸಭೆ ಕಾರ್ಯಾಲಯಕ್ಕೆ ಸಲ್ಲಿಸಬೇಕು. ನಿಗದಿತ ಅವಧಿಯಲ್ಲಿ ಆಕ್ಷೇಪಣೆ ಸಲ್ಲಿಸದಿದ್ದಲ್ಲಿ ಯಾವುದೇ ತಕರಾರು ಇಲ್ಲವೆಂದು ಪರಿಗಣಿಸಿ ಸೂಕ್ತ ಕ್ರಮ ಕೈಗೊಳ್ಳಲಾಗುವುದು ಎಂದು ರೋಣ ಪುರಸಭೆ ಕಾರ್ಯಾಲಯದ ಪ್ರಕಟಣೆ ತಿಳಿಸಿದೆ.

# ಮನುಷ್ಯನ ಅಂಧಕಾರ ಹೋಗಲಾಡಿಸಿದವ ಶಿವ



■ವಿಜಯಸಾಕ್ಷಿ ಸುದ್ದಿ, ಮುಳಗುಂದ

ಎಲ್ಲಾ ಜೀವಿಗಳಿಗಿಂತ ಬುದ್ಧಿಯುಳ್ಳವ ಮನುಷ್ಯ. ಆದರೆ ಇಂದು ಮನುಷ್ಯತ್ವ ಮರೆತು ಜೀವನ ನಡೆಸುತ್ತಿರುವುದು ಖೇದಕರ ವಿಷಯ ಎಂದು ನೀಲಗುಂದ ಗುದ್ನೇಶ್ವರಮಠದ ಪ್ರಭುಲಿಂಗ ದೇವರು ಹೇಳಿದರು.

ಅವರು ಪಟ್ಟಣದ ಈಶ್ವರೀಯ ವಿಶ್ವವಿದ್ಯಾಲಯ ಸೇವಾ ಕೇಂದ್ರ ಪರಿವಾರದಿಂದ ಬಾಲಲೀಲಾ ಮಹಾಂತ ಶಿವಯೋಗಿಗಳ ಗವಿಮಠದಲ್ಲಿ ಮಹಾಶಿವರಾತ್ರಿ ಸಭಾ ಕಾರ್ಯಕ್ರಮದ ಸಮ್ಮುಖವನ್ನು ವಹಿಸಿ ಮಾತನಾಡಿದರು.

ಜ್ಞಾನ ಹೆಚ್ಚಾದಂತೆ ಇಂದು ನಾವೆಲ್ಲರೂ ಮನುಷ್ಯತ್ವವನ್ನು ಮರೆತು ಮೃಗಗಳಾಗಿ ವರ್ತಿಸುತ್ತಿದ್ದು, ಅದನ್ನು ನಾಶ ಮಾಡಲೆಂದು ಶಿವನ ರೂಪದಲ್ಲಿ ಸಂತರು, ಮಹಾಂತರು, ಶರಣರ ಅವತಾರವಾಗಿ ಸಮಾಜವನ್ನು ಉನ್ನತ ದಾರಿಯಲ್ಲಿ ಸಾಗಲು ತಮ್ಮ ವಚನ ಸಾಹಿತ್ಯದ ಮೂಲಕ ಮುನ್ನಡೆಸಿದರು. ಆದರೂ ಮನುಷ್ಯ ನಿತ್ಯ ಹಾದಿ ತಪ್ಪಿ ನಡೆಯುವುದು ನಿಂತಿಲ್ಲ. ಮನುಷ್ಯರನ್ನು ದೇವರ ಸ್ಮರಣೆ, ಯೋಗದ ಕಡೆ ನಿತ್ಯ ಕರೆದೊಯ್ಯಲು ಮಠಾಧೀಶರು, ಈಶ್ವರೀಯ ವಿಶ್ವವಿದ್ಯಾಲಯ ನಿರಂತರ ಕಾರ್ಯ ಮಾಡುತ್ತಿದೆ ಎಂದರು.

ಕೃಷ್ಣಗೌಡ ಪಾಟೀಲ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ಮನುಷ್ಯ ಸಮಾಧಾನ, ಶಾಂತಿ ಹೊಂದಲು ನಿತ್ಯ ಯೋಗ, ಶಿವನ ಧ್ಯಾನ ಮಾಡುವುದರಿಂದ ನಮ್ಮಲ್ಲಿರುವ ಅಹಂಕಾರ ಅಳಿದು, ನಿತ್ಯ ಸುಜ್ಞಾನದ ಬೆಳಕು ದೊರೆಯುವುದು. ಇದರಿಂದ ನಿತ್ಯ ಚೈತನ್ಯಶೀಲರಾಗಿರಲು ಸಾಧ್ಯವಾಗುತ್ತದೆ ಎಂದರು.

ರಾಜಯೋಗಿನಿ ಭಾರತಿಜೀ ಮಾತನಾಡಿ, ಇಂದು ಒತ್ತಡದ ಬದುಕಿನಲ್ಲಿ ನಾವೆಲ್ಲರೂ ಬದುಕುತ್ತಿದ್ದು ಒತ್ತಡ ನಿವಾರಣೆಗೆ ನಾವೆಲ್ಲರೂ ಶಿವಧ್ಯಾನದಲ್ಲಿ ನಿತ್ಯ ತೊಡಗಿಕೊಳ್ಳುವುದರಿಂದ ನಮ್ಮ ಬದುಕು ಸುಂದರವಾಗುವುದರ ಜೊತೆಯಲ್ಲಿ ಉತ್ತಮ ಸಮಾಜ ನಿರ್ಮಿಸಲು ಸಾಧ್ಯವಾಗುತ್ತದೆ ಎಂದರು.

ಸಮ್ಮುಖವನ್ನು ನೀಲಗುಂದ ಗುದ್ನೇಶ್ವರಮಠದ ಪ್ರಭುಲಿಂಗ ದೇವರು ವಹಿಸಿದ್ದರು. ಸಮ್ಮುಖವನ್ನು ರಾಜಯೋಗಿನಿ ಶಿವಾನಿಜೀ ವಹಿಸಿದ್ದರು. ಈ.ವಿ.ವಿ.ಸಂ. ರಾ-ಜಯೋಗಿನಿ ಬಿ.ಕೆ. ಭಾರತಿಜೀ, ರಾಜಯೋಗಿನಿ ಬಿ.ಕೆ. ವಂದನಾಜೀ, ಎಂ.ಡಿ. ಬಟ್ಟೂರ, ಎಸ್.ಸಿ. ಬಡ್ನಿ, ಡಾ. ಎಸ್.ಸಿ. ಚವಡಿ, ಗೌರಮ್ಮಾ ಬಡ್ನಿ, ಬಸವರಾಜ ಸುಂಕಾಪೂರ, ಇಮಾಮಸಾಬ ಶೇಖ, ನಾಗರಾಜ ದೇಶಪಾಂಡೆ, ರಾಮಣ್ಣಾ ಕಮಾಜಿ, ಅಶೋಕ ಸೋನಗೋಜಿ, ಮಂಜುನಾಥ ಮಟ್ಟಿ, ದೇವರಾಜ ಸಂಗನಪೇಟಿ, ಪ್ರಕಾಶ ಮದ್ದಿನ, ಹಾಗೂ ಈಶ್ವರೀ ಸಂಸ್ಥೆಯ ಸಹೋದರಿಯರು ಇದ್ದರು.

# ಪಂಚ ಗ್ಯಾರಂಟಿ ಯೋಜನೆಯಿಂದ ಕ್ರಾಂತಿಕಾರಕ ಬದಲಾವಣೆ

▶▶ ಮೊದಲನೇ ಪುಟದಿಂದ

ಟೀಕೆಗಳಿಗೆ ಉತ್ತರ ದೊರಕಿದಂತಾಗಿದೆ ಎಂದರು.

ರಾಜ್ಯದ ತಲಾ ಆದಾಯದ ಹೆಚ್ಚಳದಿಂದಾಗಿ ಕೇಂದ್ರಕ್ಕೆ ರಾಜ್ಯದಿಂದ ಹೆಚ್ಚಿನ ತೆರಿಗೆಯನ್ನು ನೀಡಲಾಗುತ್ತಿದೆ. ರಾಜ್ಯದ ಅಂದಾಜು ಒಂದೂವರೆ ಕೋಟಿ ಜನ ಈ ಪಂಚಗ್ಯಾರಂಟಿ ಯೋಜನೆಗಳ ಸದುಪಯೋಗ ಪಡೆದುಕೊಳ್ಳುತ್ತಿದ್ದಾರೆ. ರಾಜ್ಯ ಸರ್ಕಾರದ ಮಹತ್ವಾಕಾಂಕ್ಷಿ ಯೋಜನೆಗಳಲ್ಲೊಂದಾದ ಪಂಚಗ್ಯಾರಂಟಿ ಯೋಜನೆ ಜಾರಿಯಿಂದಾಗಿ ತಲಾದಾಯ ದಲ್ಲಿಯೂ ಕೂಡ ರಾಜ್ಯವು ಪ್ರಥಮ ಸ್ಥಾನದಲ್ಲಿದೆ ಎಂದು ತಿಳಿಸಿದರು.

ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಜಿಲ್ಲಾಧ್ಯಕ್ಷ ಬಿ.ಬಿ. ಅಸೂಟಿ ಮಾತನಾಡಿ, ರಾಜ್ಯ ಸರಕಾರ ಅಧಿಕಾರಕ್ಕೆ ಬರುವ ಪೂರ್ವದಲ್ಲಿ ಘೋಷಿಸಿದ ಗ್ಯಾರಂಟಿ ಯೋಜನೆಗಳನ್ನು ಯಶಸ್ವಿಯಾಗಿ ಅನುಷ್ಠಾನಗೊಳಿಸಲಾಗಿದೆ. ಜಿಲ್ಲೆಯ ಗ್ಯಾರಂಟಿ ಅನುಷ್ಠಾನ ಪ್ರಾಧಿಕಾರ ಸಮಿತಿ ಸಭೆಗಳನ್ನು ನಿರಂತರವಾಗಿ ಜರುಗಿಸಿ ಅರ್ಹ ಎಲ್ಲ ಫಲಾನುಭವಿಗಳನ್ನು ಗ್ಯಾರಂಟಿ ಯೋಜನೆಗೆ ಒಳಪಡಿಸಲಾಗಿದೆ ಎಂದರು.

ಕಾರ್ಯಕ್ರಮದಲ್ಲಿ ರಾಜ್ಯ ವಿಕೇಂದ್ರೀಕರಣ ಯೋಜನೆ ಮತ್ತು ಅಭಿವೃದ್ಧಿ ಸಮಿತಿ ಉಪಾಧ್ಯಕ್ಷ ಡಿ.ಆರ್. ಪಾಟೀಲ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕಬರಸಾಬ ಬಬರ್ಚಿ, ಉಪಾಧ್ಯಕ್ಷರುಗಳಾದ ನೀಲಮ್ಮ ಬೋಳನವರ, ದೀಪಕ ಲಮಾಣಿ, ಹೇಮಂತಗೌಡ ಪಾಟೀಲ, ಪಿ.ಬಿ. ಅಳಗವಾಡಿ, ಫಕ್ರುಸಾಬ ಚಿಕ್ಕಮಣ್ಣೂರ, ತಾಲೂಕು ಗ್ಯಾರಂಟಿ ಯೋಜನೆಗಳ ಪ್ರಾಧಿಕಾರದ ಅಧ್ಯಕ್ಷರುಗಳಾದ ಅಶೋಕ ಮಂದಾಲಿ, ಸಂಗನಗೌಡ ಪಾಟೀಲ, ವಿವೇಕ ಯಾವಗಲ್, ದೇವಪ್ಪ ಮೋರನಾಳ, ನಾಗರಾಜ ಶಿವಪ್ಪ ಮಡಿವಾಳರ, ಶರಣಪ್ಪ ಬೆಟಗೇರಿ, ವೀರಯ್ಯ ಮಠಪತಿ, ಜಿಲ್ಲಾ ಗ್ಯಾರಂಟಿ ಯೋಜನೆಗಳ ಪ್ರಾಧಿಕಾರದ ಸದಸ್ಯರುಗಳಾದ ಪುಲಕೇಶಗೌಡ ಪಾಟೀಲ, ಈಶಣ್ಣ ಹುಣಸಿಕಟ್ಟಿ, ಶರೀಫ್ ಬೆಳೆಯಲಿ, ರಾಜೀವ ಗೊಡಚಪ್ಪ ಕುಂಬಿ, ಶಿವನಗೌಡ ಪಾಟೀಲ, ಆರ್.ಆರ್. ಗಡ್ಡದೇವರಮಠ, ಗೀತಾ ಬೀರಣ್ಣವರ, ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರೋಹನ ಜಗದೀಶ್, ಮಾಜಿ ಶಾಸಕರಾದ ರಾಮಣ್ಣ ಲಮಾಣಿ, ಜಿ.ಪಂ ಮಾಜಿ ಅಧ್ಯಕ್ಷ ವಾಸಣ್ಣ ಕುರಡಗಿ ಮುಂತಾದವರು ಉಪಸ್ಥಿತರಿದ್ದರು.

ಪ್ರೊ. ಬಾಹುಬಲಿ ಜೈನರ ಕಾರ್ಯಕ್ರಮ ನಿರೂಪಿಸಿದರು. ಡೋಣಿ ಗ್ರಾಮದ ನಿಂಗಣ್ಣ ಗಡಾದ ಹಾಗೂ ತಂಡದವರು ಪಂಚ ಗ್ಯಾರಂಟಿ ಕುರಿತು ಜನಪದ ಗೀತೆ, ವೆಂಕಟೇಶ ಅಲ್ಕೋಡ ಹಾಗೂ ತಂಡದವರು ನಾಡಗೀತೆ ಪ್ರಸ್ತುತಪಡಿಸಿದರು.

ಇದೇ ಸಂದರ್ಭದಲ್ಲಿ ಪಂಚ ಗ್ಯಾರಂಟಿ ಯೋಜನೆಯ ಗದಗ ಜಿಲ್ಲೆಯ ಅಧ್ಯಯನ ವರದಿಯನ್ನು ಬಿಡುಗಡೆಗೊಳಿಸಲಾಯಿತು.

# ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

2025–2026ನೇ ಸಾಲಿನ ಶಿರಹಟ್ಟಿ ತಾಲೂಕಿಗೆ ಮಂಜೂರಾದ ಸಮಾಜ ಕಲ್ಯಾಣ ಇಲಾಖೆಯ ಮೆಟ್ರಿಕ್ ನಂತರದ ಬಾಲಕರ ವಸತಿ ನಿಲಯಗಳಲ್ಲಿ ಖಾಲಿ ಇರುವ ಸ್ಥಾನಗಳಿಗೆ ಅರ್ಹ ಪರಿಶಿಷ್ಟ ಜಾತಿ (SC), ಪರಿಶಿಷ್ಟ ವರ್ಗ (ST) ಹಾಗೂ ಇತರೆ ಹಿಂದುಳಿದ ವರ್ಗಗಳ (OBC) ವಿದ್ಯಾರ್ಥಿಗಳಿಂದ ವಸತಿ ನಿಲಯ ಪ್ರವೇಶಕ್ಕಾಗಿ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಪ್ರವೇಶ ಬಯಸುವ ವಿದ್ಯಾರ್ಥಿಗಳು ಕಡ್ಡಾಯವಾಗಿ ಸಮಾಜ ಕಲ್ಯಾಣ ಇಲಾಖೆಯ ಅಧಿಕೃತ ವೆಬ್‌ಸೈಟ್‌ಗಳಾದ https://swd.karnataka.gov.in/Portal ಹಾಗೂ https://swdhmis.karnataka.gov.in/ ಮೂಲಕ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಬೇಕು. ಆನ್‌ಲೈನ್‌ನಲ್ಲಿ ಸಲ್ಲಿಸಿದ ಅರ್ಜಿಯ ಪ್ರತಿಯನ್ನು ಪಡೆದು, ಅಗತ್ಯ ದಾಖಲೆಗಳನ್ನು ಲಗತ್ತಿಸಿ ಸಂಬಂಧಿಸಿದ ಕಾಲೇಜಿನ ಪ್ರಾಚಾರ್ಯರಿಂದ ದೃಢೀಕರಿಸಿ, ಸಮಾಜ ಕಲ್ಯಾಣ ಇಲಾಖೆಗೆ ಸಲ್ಲಿಸಬೇಕು. ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ: ಫೆಬ್ರವರಿ ತಿಂಗಳೊಳಗೆ (ನಿಖರ ದಿನಾಂಕಕ್ಕಾಗಿ ಕಚೇರಿಯನ್ನು ಸಂಪರ್ಕಿಸಬಹುದು).

ಹೆಚ್ಚಿನ ಮಾಹಿತಿಗಾಗಿ: ಸಹಾಯಕ ನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ, ಶಿರಹಟ್ಟಿ ಕಾರ್ಯಾಲಯವನ್ನು ಸಂಪರ್ಕಿಸಲು ಪ್ರಕಟಣೆಯಲ್ಲಿ ತಿಳಿಸಲಾಗಿದೆ.

# ನಾಳೆ ವಿದ್ಯುತ್ ವ್ಯತ್ಯಯ

■ವಿಜಯಸಾಕ್ಷಿ ಸುದ್ದಿ, ಗದಗ

110 ಕೆವ್ಹಿ ಗದಗ ವಿದ್ಯುತ್ ವಿತರಣಾ ಕೇಂದ್ರದಲ್ಲಿ ತ್ರೈಮಾಸಿಕ ನಿರ್ವಹಣಾ ಕಾಮಗಾರಿ ಕೈಗೊಳ್ಳುವುದರಿಂದ ಫೆ. 20ರಂದು ಮುಂಜಾನೆ 10 ಗಂಟೆಯಿಂದ ಸಾಯಂಕಾಲ 5.30 ಗಂಟೆಯವರೆಗೆ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯ ಉಂಟಾಗಲಿದೆ. ಸದರಿ ಉಪಕೇಂದ್ರಗಳಿಂದ ಪೂರೈಕೆಯಾಗುವ ಜಿಮ್ಸ್ ಆಸ್ಪತ್ರೆ, ಕುಡಿಯುವ ನೀರಿನ ಸ್ಥಾವರಗಳು, 33 ಕೆವ್ಹಿ ಐ.ಪಿ.ಪಿ–ಕೆ.ಪಿ.ಸಿ.ಎಲ್, ನಾಗಾವಿ, ಮಲ್ಲಸಮುದ್ರ, ಪಯೋನಿರ್, ಟಿ.ಡಿ.ಪಿ ಎಲ್ 1, ಮತ್ತು 2, 33 ಕೆವಿ ಉಪಕೇಂದ್ರ–ಹುಲಕೋಟಿ, ಲಕ್ಕುಂಡಿ, ಕೆ.ಎಚ್.ಬಿ ಹಾಗೂ ಎಲ್ಲಾ 11 ಕೆವ್ಹಿ ನಗರ, ಗ್ರಾಮೀಣ, ಕೈಗಾರಿಕಾ, ಸೋಲಾರ್ ಐ.ಪಿ.ಪಿ ಮತ್ತು ನೀರಾವರಿ ಪಂಪ್‌ಸೆಟ್‌ಗಳ ವಿದ್ಯುತ್ ಮಾರ್ಗಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದ್ದು, ಸಾರ್ವಜನಿಕರು ಸದರಿ ಪ್ರಕಟಣೆ ಗಮನಿಸಿ ಕಂಪನಿಯೊಂದಿಗೆ ಸಹಕರಿಸಬೇಕಾಗಿ ಹೆಸ್ಕಾಂ ವಿನಂತಿಸಿದೆ.

**ಮುಕ್ತಿಮಂದಿರ ಧರ್ಮಕ್ಷೇತ್ರದಿಂದ ಲಕ್ಷ್ಮೇಶ್ವರ ಸಿ.ಸಿ. ರಸ್ತೆ ಕಾಮಗಾರಿಗೆ ಶಾಸಕ ಡಾ. ಚಂದ್ರು ಲಮಾಣಿ ಚಾಲನೆ**

# ಮುಕ್ತಿಮಂದಿರ ರಸ್ತೆಗೆ ಕೊನೆಗೂ ಸುಧಾರಣೆ ಭಾಗ್ಯ



ಈ ವೇಳೆ ಮಾತನಾಡಿದ ರಂಭಾಪುರಿ ಜ. ಡಾ. ವೀರಸೋಮೇಶ್ವರ ಶಿವಾಚಾರ್ಯ ಭಗವತ್ಪಾದಂಗಳವರು ಬಹು ದಿನಗಳಿಂದ ಈ ರಸ್ತೆ ಸುಧಾರಣೆಗಾಗಿ ಬೇಡಿಕೆ ಸಲ್ಲಿಸಲಾಗುತ್ತಿತ್ತು. ಆದರೆ ಆ ಕಾಮಗಾರಿಯ ಬಗ್ಗೆ ಶಾಸಕ ಡಾ. ಚಂದ್ರು ಲಮಾಣಿಯವರು ವಿಶೇಷ ಕಾಳಜಿ ವಹಿಸಿ ಕೊನೆಗೂ ಈ ರಸ್ತೆ ಸುಧಾರಣೆಗೆ ಕ್ರಮ ಕೈಗೊಂಡಿರುವದು ಶ್ಲಾಘನೀಯ. ಇದು ಅವರ ಕ್ರಿಯಾಶೀಲ ವ್ಯಕ್ತಿತ್ವಕ್ಕೆ ಸಾಕ್ಷಿಯಾಗಿದೆ. ಮುಕ್ತಿಮಂದಿರ ಧರ್ಮಕ್ಷೇತ್ರದಲ್ಲಿ ತ್ರಿಕೋಟಿ ಶಿವಲಿಂಗಗಳ ಸ್ಥಾಪನೆ ಕಾರ್ಯ ಭರದಿಂದ ಸಾಗಿದ್ದು, ಸಾಕಷ್ಟು ಭಕ್ತರು ಕ್ಷೇತ್ರಕ್ಕೆ ಆಗಮಿಸುತ್ತಿದ್ದಾರೆ. ಈ ಹಿನ್ನೆಲೆಯಲ್ಲಿ ರಸ್ತೆ ಸುಧಾರಣೆ ಅವಶ್ಯವಾಗಿದ್ದು, ಶಾಸಕರು ಈ ಕಾರ್ಯವನ್ನು ಈಡೇರಿಸಿದ್ದಾರೆ ಎಂದು ನುಡಿದರು.

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ತಾಲೂಕಿನ ಮುಕ್ತಿಮಂದಿರ ಧರ್ಮಕ್ಷೇತ್ರದಿಂದ ಲಕ್ಷ್ಮೇಶ್ವರ ಸಿ.ಸಿ. ರಸ್ತೆ ಕಾಮಗಾರಿಗೆ ರಂಭಾಪುರಿ ಜ. ವೀರಸೋಮೇಶ್ವರ ಶಿವಾಚಾರ್ಯ ಭಗವತ್ಪಾದರ ಸಾನ್ನಿಧ್ಯದಲ್ಲಿ ಹಾಗೂ ಮುಕ್ತಿಮಂದಿರ ಶ್ರೀಗಳ ಸಮ್ಮುಖದಲ್ಲಿ ಶಾಸಕ ಡಾ. ಚಂದ್ರು ಲಮಾಣಿ ಮಂಗಳವಾರ ಭೂಮಿಪೂಜೆ ನೆರವೇರಿಸಿದರು.

ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆಯ 2024–25ನೇ ಸಾಲಿನ 5054 ಯೋಜನೆಯಡಿಯಲ್ಲಿ ಅಂದಾಜು 35 ಲಕ್ಷ ರೂಗಳ ವೆಚ್ಚದಲ್ಲಿ ಸಿ.ಸಿ. ರಸ್ತೆ ಕಾಮಗಾರಿಗೆ ಚಾಲನೆ ನೀಡಲಾಯಿತು.

ಶಾಸಕ ಡಾ. ಚಂದ್ರು ಲಮಾಣಿ ಮಾತನಾಡಿ, ನಡೆದಾಡುವ ದೇವರು ಎಂದು ಪ್ರಸಿದ್ಧರಾಗಿದ್ದ ಲಿಂ. ಜ. ವೀರಗಂಗಾಧರ ಮಹಾಸ್ವಾಮಿಗಳ ತಪೋಭೂಮಿ ನಮ್ಮ ಕ್ಷೇತ್ರದಲ್ಲಿರುವದು ನಮ್ಮ ಭಾಗ್ಯವಾಗಿದ್ದು, ತ್ರಿಕೋಟಿ ಲಿಂಗ ಸ್ಥಾಪನೆಯಿಂದ ಮುಕ್ತಿಮಂದಿರ ಮುಂದಿನ ದಿನಗಳಲ್ಲಿ ಪವಿತ್ರ ಯಾತ್ರಾ ಸ್ಥಳವಾಗಿ ಮಾರ್ಪಡಲಿದೆ, ವಿಶ್ವ ಪ್ರಸಿದ್ಧಿ ಪಡೆಯಲಿದೆ. ನಾನು ಈ ಸ್ಥಾನಕ್ಕೇರಲು ಶ್ರೀ-ಕ್ಷೇತ್ರದ ಆಶೀರ್ವಾದವಿದ್ದು, ಬಾಕಿ ಉಳಿದ ಲಕ್ಷ್ಮೇಶ್ವರ–ಮುಕ್ತಿಮಂದಿರ ರಸ್ತೆ ಕಾಮಗಾರಿಯನ್ನು ಜಗದ್ಗುರುಗಳ ಸಾನ್ನಿಧ್ಯದಲ್ಲಿ ಭೂಮಿ ಪ್ರಜೆಯಾಗಿರುವದು ಹೆಚ್ಚು ಸಂತೋಷದ ವಿಷಯವಾಗಿದೆ. ಒಂದು ತಿಂಗಳಲ್ಲಿ ಕಾಮಗಾರಿ ಪೂರ್ಣಗೊಳಿಸಲು ಗುತ್ತಿಗೆದಾರಿಗೆ ಸೂಚಿಸಲಾಗಿದ್ದು, ಮುಕ್ತಿಮಂದಿರ–ಗುಲಗಂಜಿಕೊಪ್ಪ ರಸ್ತೆಯ ಸುಧಾರಣೆಗೂ ಸಹ ಆದಷ್ಟು ಶೀಘ್ರ ಕ್ರಮ ಕೈಗೊಳ್ಳಲಾಗುವದು ಎಂದು ಹೇಳಿದರು.

ಈ ವೇಳೆ ಮುಕ್ತಿಮಂದಿರ ಪಟ್ಟಾಧ್ಯಕ್ಷರಾದ ಶ್ರೀ ವಿಮಲರೇಣುಕ ಶಿವಾಚಾರ್ಯ ಸ್ವಾಮಿಗಳು, ಶಿವಾಚಾರ್ಯರು, ಸುನೀಲ ಮಹಾಂತಶೆಟ್ಟರ, ರುದ್ರು, ವಿಜಯ ಬೂದಿಹಾಳ, ಇಂಜಿನಿಯರ್ ಅನಿಲ ಜಾಧವ್, ಮಲ್ಲಿಕಾರ್ಜುನ ಪಾಟೀಲ ಮುಂತಾದವರಿದ್ದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka